ಶ್ರೀ

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 44 RNI Number : KNKAN/25/A2770 18-02-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :44 ರಾಯಚೂರು 18-02-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ನಾಯಕತ್ವ ತೀರ್ಮಾನದ ಬಗ್ಗೆ ಸಿದ್ದರಾಮಯ್ಯನವರೇ ರಾಜ್ಯದ ಜನರಿಗೆ ಸಂದೇಶ ಕೊಡ್ತಾರೆ: ಡಿಕೆಶಿ

ಬೆಂಗಳೂರು,ಫೆ.17-

ನಾಯಕತ್ವ ವಿಚಾರವಾಗಿ ಈ ಹಿಂದೆ ಹೇಳಿರುವಂತೆ ನಾನು, ಸಿದ್ದರಾಮಯ್ಯನವರು ಹಾಗೂ ಹೈಕಮಾಂಡ್ ಎಲ್ಲರೂ ಸೇರಿ ತೆಗೆದುಕೊಂಡಿರುವ ತೀರ್ಮಾನ. ಈ ತೀರ್ಮಾನವೇನು ಎಂಬುದು ಸಮಯ ಬಂದಾಗ ತಿಳಿಯುತ್ತದೆ. ಇದು ಕದ್ದುಮುಚ್ಚಿ ಮಾಡಿಕೊಂಡಿರುವ ಗುಟ್ಟು ವ್ಯವಹಾರವಲ್ಲ. ಸಮಯ ಬಂದಾಗ ಸಿದ್ದರಾಮಯ್ಯ ಅವರೇ ರಾಜ್ಯದ ಜನರಿಗೆ ಸಂದೇಶ ನೀಡುತ್ತಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬಳ್ಳಾರಿ ರಸ್ತೆಯಲ್ಲಿರುವ ರಾಜ್ಯ ಚುನಾವಣಾ ಆಯೋಗದ ಕಚೇರಿ ಬಳಿ ಇಂದು ಮಾತನಾಡಿದ ಅವರು, ಅಧಿಕಾರ ಹಂಚಿಕೆ ವಿಚಾರವಾಗಿ ಸಚಿವ ಹೆಚ್.ಸಿ ಮಹದೇವಪ್ಪ ಹೇಳಿಕೆಗೆ ಪ್ರತಿಕ್ರಿಯಿಸುತ್ತಾ, ನಾಯಕರ ಹೇಳಿಕೆಗಳ ಬಗ್ಗೆ ಸಿಎಂ ಹಾಗೂ ಹೈಕಮಾಂಡ್ ನಾಯಕರು ಕ್ರಮ ಕೈಗೊಳ್ಳುತ್ತಾರೆ. ನಾನು ಮಹದೇವಪ್ಪ ಹಾಗೂ ಬೇರೆಯವರಿಗೆ ಉತ್ತರ ನೀಡಲು ತಯಾರಿಲ್ಲ. ಸಚಿವ ಹೆಚ್.ಸಿ.ಮಹದೇವಪ್ಪ ಬಹಳ ದೊಡ್ಡವರು. ಈಗ ಅವರೂ ನಮ್ಮ ಹೈಕಮಾಂಡ್ ಭಾಗವಾಗಿದ್ದಾರೆ. ಅವರ ಬಗ್ಗೆ ನಾನು ಏನನ್ನೂ ಮಾತನಾಡುವುದಿಲ್ಲ. ಈ ಬಗ್ಗೆ ಪಕ್ಷವೇ ತೀರ್ಮಾನ ಮಾಡಲಿ. ಸಿದ್ದರಾಮಯ್ಯ ಅವರೇ ಸಮಯ ಬಂದಾಗ ನಮ್ಮ ತೀರ್ಮಾನದ ಬಗ್ಗೆ ರಾಜ್ಯದ ಜನಕ್ಕೆ ಸಂದೇಶ ನೀಡುತ್ತಾರೆ ಎಂದು ಡಿಕೆಶಿ ತಿಳಿಸಿದರು.

ನನಗೆ ಶಾಸಕರ ವಿದೇಶ ಪ್ರವಾಸ ಗೊತ್ತಿಲ್ಲ: ಶಾಸಕರ ವಿದೇಶ ಪ್ರವಾಸದ ಬಗ್ಗೆ ಪ್ರತಿಕ್ರಿಯಿಸಿ, ನನಗೆ ಯಾವ ಪ್ರವಾಸದ ಬಗ್ಗೆ ಮಾಹಿತಿ ಇಲ್ಲ. ಈ ಬಗ್ಗೆ ನನಗೆ ಮಾಧ್ಯಮಗಳಿಂದಷ್ಟೇ ತಿಳಿದಿದೆ. ಇದು ಅವರ ವೈಯಕ್ತಿಕ ಪ್ರವಾಸವೋ, ಬೇರೆಯವರು ಅವರನ್ನು ಪ್ರವಾಸಕ್ಕೆ ಕಳುಹಿಸುತ್ತಿದ್ದಾರೋ ಗೊತ್ತಿಲ್ಲ. ಇದು ಪ್ರವಾಸ ಕಳುಹಿಸುತ್ತಿರುವವರು ಉಂಟು ಹಾಗೂ ಹೋಗುತ್ತಿರುವವರು ಉಂಟು. ಪಕ್ಷದ ಅಧ್ಯಕ್ಷನಾಗಿ ನಾನು ಇದರಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದರು.

ಆರ್‌ಎಸ್‌ಎಸ್ ಕಚೇರಿಗೆ ಬಿಜೆಪಿ ಸರ್ಕಾರ ನೂರಾರು ಎಕರೆ ಕೊಟ್ಟಿಲ್ಲವೇ?: ಕಾಂಗ್ರೆಸ್ ಭವನಗಳಿಗೆ ಸರ್ಕಾರಿ ಜಮೀನು ಬಳಸಿಕೊಳ್ಳಲಾಗುತ್ತಿದೆ ಎಂಬ ಬಿಜೆಪಿ ನಾಯಕರ ಆರೋಪದ ಬಗ್ಗೆ ಪ್ರತಿಕ್ರಿಯಿಸುತ್ತಾ, ಖಂಡಿತವಾಗಿ ನಾವು ಕಾಂಗ್ರೆಸ್ ಭವನಗಳಿಗೆ ಸರ್ಕಾರಿ ಜಾಗ ಬಳಸಿಕೊಳ್ಳುತ್ತಿದ್ದೇವೆ. ನಾವು ಮಹಾತ್ಮ ಗಾಂಧೀಜಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷತೆಯ ಶತಮಾನೋತ್ಸವ ಹಿನ್ನೆಲೆಯಲ್ಲಿ 100 ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಮುಂದಾಗಿದ್ದೇವೆ. ನಾವು 5-10 ಸಾವಿರ ಚದರ ಅಡಿಗಳಷ್ಟು ಜಾಗವನ್ನು ಮಂಜೂರು ಮಾಡುತ್ತಿದ್ದೇವೆ. ಬಿಜೆಪಿ ಆಡಳಿತ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ 100ಕ್ಕೂ ಹೆಚ್ಚು ಕಡೆಗಳಲ್ಲಿ ವಿವಿಧ ಟ್ರಸ್ಟ್‌ಗಳ ಹೆಸರಿನಲ್ಲಿ ಜಾಗ ಪಡೆದಿದ್ದಾರೆ. ಚಾಣಾಕ್ಯ ವಿವಿಗೆ ನೀಡಿರುವ ಜಾಗ ಪ್ರತಿ ಎಕರೆಗೆ 10 ಕೋಟಿ ರೂಪಾಯಿ ಬೆಲೆಬಾಳುತ್ತದೆ. ಆದರೆ ಬಿಜೆಪಿಯವರು ಪ್ರತಿ ಎಕರೆಗೆ 50 ಲಕ್ಷದ ದರದಲ್ಲಿ 100 ಎಕರೆ ಜಾಗ ಮಂಜೂರು ಮಾಡಿದ್ದು, ಸಿಎಸ್ ಆರ್ ನಿಧಿ ಮೂಲಕ ಕೋಟ್ಯಂತರ ರೂಪಾಯಿ ಸಂಗ್ರಹಿಸಿದ್ದಾರೆ. ಅವರು ಅಧಿಕಾರ ದುರುಪಯೋಗ ಮಾಡಿಕೊಂಡಿದ್ದರು ಎಂದು ಡಿಸಿಎಂ ದೂರಿದರು.

ಬಿಜೆಪಿ ಜಾಗ ಮಂಜೂರು ಮಾಡದೇ, ಆರ್‌ಎಸ್‌ಎಸ ಕಚೇರಿ ಹೇಗೆ ನಿರ್ಮಾಣವಾಯಿತು? ಸದಾಶಿವನಗರದಲ್ಲಿ ನಮ್ಮ ಮನೆಯ ಪಕ್ಕದಲ್ಲಿರುವ ಪಾರ್ಕ್ ಅನ್ನು ವೆಲ್‌ನೆಸ್ ಸೆಂಟರ್‌ನ ಯೋಗಾ ಕಚೇರಿಗೆ ನೀಡಿದ್ದು, ಕಚೇರಿ ಕಟ್ಟಿಕೊಂಡಿದ್ದಾರೆ. ಇಂತಹ ನೂರಾರು ಉದಾಹರಣೆಗಳನ್ನು ನಾನು ನೀಡಬಲ್ಲೆ. ಅವರು ನಮಗೆ ಬೋಧನೆ ಮಾಡುವ ಅಗತ್ಯವಿಲ್ಲ. ಅವರು ಏನಾದರೂ



ಆರೋಪ ಮಾಡಿಕೊಳ್ಳಲಿ. ನಾವು ನಮ್ಮ ಪಕ್ಷದ ದೇವಾಲಯವನ್ನು ಕಟ್ಟಲು ಈ ತೀರ್ಮಾನಕ್ಕೆ ಬಂದಿದ್ದೇವೆ. ಇದು ನಮ್ಮ ಕರ್ತವ್ಯ. ನಾನು ಇದನ್ನು ಮಾಡಿಯೇ ಮಾಡುತ್ತೇನೆ. ಎಲ್ಲಾ ಮಾನದಂಡಗಳು, ಅರ್ಹತೆ ಆಧಾರದ ಮೇಲೆ ನಾವು ಈ ಜಾಗವನ್ನು ಮಂಜೂರು ಮಾಡುತ್ತಿದ್ದೇವೆ. ಈ ಬಗ್ಗೆ ಯಾರಾದರೂ ನ್ಯಾಯಾಲಯದ ಮೆಟ್ಟಿಲೇರುವುದಾದರೆ ಏರಲಿ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆ; ಜಿಲ್ಲಾ ಮಟ್ಟದ ತರಬೇತಿ

ಮಹಿಳೆಯರ, ಮಕ್ಕಳ ಸಾಗಣೆ ತಡೆಗೆ ಮುಂದಾಗಿ: ನ್ಯಾ.ಹೆಚ್.ಎ.ಸಾತ್ವಿಕ್

ರಾಯಚೂರು ಫೆ. 17-

ಮಹಿಳೆಯರ ಮತ್ತು ಮಕ್ಕಳನ್ನು ಸಾಗಣೆ ಮಾಡುವ ಅನೈತಿಕ ಚಟುವಟಿಕೆಯನ್ನು ತೊಲಗಿಸುವ ಕಾರ್ಯಕ್ಕೆ ಸಾರ್ವಜನಿಕರು ಸಹಕರಿಸಬೇಕ. ಆಗ ಮಾತ್ರ ಅಮಾನವೀಯ ಕೃತ್ಯ ನಿಯಂತ್ರಿಸಲು ಸಾಧ್ಯ ಎಂದು ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ನ್ಯಾ.ಹೆಚ್.ಎ.ಸಾತ್ವಿಕ್ ಅವರು ಹೇಳಿದರು.



ಫೆ.17ರ ಮಂಗಳವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೊದಲನೆ ಮಹಡಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿವಿಧ ಭಾಗೀಧಾರ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಕುರಿತು ಹಾಗೂ ಐಟಿಪಿಎ-1956ರ ಕಾಯ್ದೆಯ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಒಂದು ದಿನದ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾನವ ಕಳ್ಳ ಸಾಗಾಣೆಯಂತಹ ದುಷ್ಕೃತ್ಯ ಸಮಾಜಕ್ಕೆ ಮಾರಕವಾಗಿದೆ. ಜತೆಗೆ ಮೂಲ ಹಕ್ಕುಗಳ ಉಲ್ಲಂಘನೆ ಕುರಿತು ಅನೇಕ ದೂರುಗಳು ದಾಖಲಾಗುತ್ತಿವೆ. ಆದ್ದರಿಂದ ಉತ್ತಮ ಸಮಾಜ ನಿರ್ಮಾಣಕ್ಕಾಗಿ ಜವಾಬ್ದಾರಿ ಅರಿತು ಸಾರ್ವಜನಿಕರು ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಇದಕ್ಕೂ ಮೊದಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಮಾತನಾಡಿ, ಸಮಾಜದಲ್ಲಿ ನಡೆಯುವಂಥ ಕಾನೂನು ಬಾಹಿರ ಘಟನೆಗಳಿಗೆ ಮೌನವಹಿಸಿದರೆ, ಪರೋಕ್ಷವಾಗಿ ಅಪರಾಧಿಗಳಾದಂತೆ. ಆದ್ದರಿಂದ ಕಣ್ಣ ಮುಂದೆ ದುಷ್ಕೃತ್ಯಗಳು ನಡೆದಾಗ ಅದನ್ನು

3ನೇ ಪುಟಕ್ಕೆ

ಕೇಂದ್ರ ತಂಡದ ಅಧಿಕಾರಿಗಳಿಂದ ನರೇಗಾ ಕಾಮಗಾರಿ ಪರಿಶೀಲನೆ



ರಾಯಚೂರು ಫೆಬ್ರವರಿ 17

ತಾಲ್ಲೂಕಿನ ಚಂದ್ರಬಡಾ ಹಾಗೂ ಬಾಯಿದೊಡ್ಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಕಾಮಗಾರಿಗಳನ್ನು ಕೇಂದ್ರ ಆಡಿಟ್ ತಂಡದ ಅಧಿಕಾರಿ ಕುಮುದ್ ದುಬೆ ಅವರು ಫೆ.16ರ ಸೋಮವಾರ ದಂದು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲಿಗೆ ಚಂದ್ರಬಡಾ ಗ್ರಾಮ ಪಂಚಾಯತಿ ಕಚೇರಿಗೆ ಭೇಟಿ ನೀಡಿ ಕಾಮಗಾರಿ ಕಡತ, ನೋಂದಣಿ, ಎನ್.ಎಂ.ಎ.ಎಸ್. ಹಾಜರಾತಿಗಳಿಗೆ ಸಂಬಧಿಸಿದ ಮಾಹಿತಿಯನ್ನು ಪಡೆದುಕೊಂಡರು.

ನತರ ಅರಿಸಿಗೇರಾ ತಾಂಡದಲ್ಲಿರುವ ದನದ ಕೊಟ್ಟಿಗೆ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ನಂತರ ನಾಗನದೊಡ್ಡ ಗ್ರಾಮದಲ್ಲಿರುವ ಸಾಮಾಜಿಕ ಅರಣ್ಯದಲ್ಲಿ ಕಂದಕ ಬದು ನಿರ್ಮಾಣ, ದನದ ಕೊಟ್ಟಿಗೆ ಹಾಗೂ ಚಿಂತಲ ಕುಂಟ ಅಮೃತ ಸರೋವರ ಕೆರೆ ಕಾಮಗಾರಿಗಳನ್ನು ವೀಕ್ಷಿಸಿದರು.

ನಂತರ ಚಂದ್ರಬಡಾ ಗ್ರಾಮದಲ್ಲಿರುವ ಕೀರಾಕುಂಟ ಅಮೃತ ಸರೋವರ ಕೆರೆ ಕಾಮಗಾರಿಯನ್ನು ಪರಿವೀಕ್ಷಣೆ ಮಾಡಿದರು. ನಂತರ ಬಾಯಿ ದೊಡ್ಡ ಗ್ರಾಮ ಪಂಚಾಯತಿಯ ಕಡಗಂದೊಡ್ಡಿ ಗ್ರಾಮದ ಮೆಟಲ್ ರಸ್ತೆ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿದರು.

ನಂತರ ಕುರುಬದೊಡ್ಡಿ ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿ ಕಾರ್ಮಿಕರ ಎನ್.ಎಂ.ಎ.ಎಸ್. ಹಾಜರಾತಿ, ಉದ್ಯೋಗ ಚೀಟಿ ಮತ್ತು ಕೆಲಸದ ಪ್ರಮಾಣವನ್ನು ಪರಿಶೀಲಿಸಿದರು. ನಂತರ ಚಂದ್ರಬಡಾ ಗ್ರಾಮ ಪಂಚಾಯತಿಯ ಕಟ್ಲಟ್ಕೂರು ಗ್ರಾಮದಲ್ಲಿ ಚರಂಡಿ ನಿರ್ಮಾಣ ಕಾಮಗಾರಿಯನ್ನು ವೀಕ್ಷಿಸಿದರು.

3ನೇ ಪುಟಕ್ಕೆ

ಬೊಮ್ಮನಾಳದಲ್ಲಿ ಚರ್ಚ್ ಹೆಬ್ಬಾಗಿಲು ಅನಾವರಣ, ಸನ್ಮಾನ

ಕ್ರೈಸ್ತ ಮಿಷನರಿಗಳ ಶೈಕ್ಷಣಿಕ, ಆರೋಗ್ಯ ಸೇವೆ ಅನನ್ಯ-ಬಿ.ವೆಂಕಟಸಿಂಗ್



ರಾಯಚೂರು,ಫೆ.17-

ಸಮಾಜದಲ್ಲಿ ಬಡವರಿಗೆ ಕ್ರೈಸ್ತ ಮಿಷನರಿಗಳು ಮಾಡಿದ ನೆರವಿನಿಂದ ಶಿಕ್ಷಣ ಮತ್ತು ಅವಕಾಶ ವಂಚಿತರು ಮುನ್ನೆಲೆಗೆ ಬರಲು ಅನುಕೂಲವಾಗಿದೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಕಲಬುರ್ಗಿ ಪೀಠದ ಆಯುಕ್ತ ಬಿ.ವೆಂಕಟಸಿಂಗ್ ಹೇಳಿದರು.

ಅವರು ಜಿಲ್ಲೆಯ ದೇವದುರ್ಗ ತಾಲೂಕಿನ ಸ್ವಗ್ರಾಮ ಬೊಮ್ಮನಾಳ ಗ್ರಾಮದಲ್ಲಿ ನಿರ್ಮಿಸುತ್ತಿರುವ ಕ್ರೈಸ್ತ ಸಮುದಾಯದ ಚರ್ಚ್ ಹೆಬ್ಬಾಗಿಲು ಅನಾವರಣಕ್ಕೆ ಚಾಲನೆ ನೀಡಿದ ಅವರು ಮೇಥೋಡಿಸ್ಟ್ ಸಮುದಾಯದವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು. ದೇಶದ ಸ್ವಾತಂತ್ರ ಪೂರ್ವ ಮತ್ತು ನಂತರ ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣ ವಂಚಿತ ಸಮುದಾಯಗಳಿಗೆ ಶಿಕ್ಷಣ ಹಾಗೂ ವೈದ್ಯಕೀಯ ಸೌಲಭ್ಯ ನೀಡುವಲ್ಲಿ ತಮ್ಮದೆ ಆದ ಕೊಡುಗೆ ನೀಡಿರುವ ಕ್ರೈಸ್ತ ಸಮುದಾಯವನ್ನು ಜನಸಾಮಾನ್ಯರು ಮರೆತಿಲ್ಲ ಎಂದರು.

3ನೇ ಪುಟಕ್ಕೆ

ರಾಜ್ಯ ಕೇಂದ್ರ ಸರ್ಕಾರಗಳ ವಿರುದ್ಧ ಅಂಗವಿಕಲರ ಪ್ರತಿಭಟನೆ: ಫೆ.19ರಿಂದ ಬೈಕ್ ರ್‍ಯಾಲಿ ಆರಂಭ

ರಾಯಚೂರು,ಫೆ.17-

ಅಂಗವಿಕಲರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಫೆಬ್ರವರಿ 19ರಿಂದ 23ರವರೆಗೆ ಬಸವ ಕಲ್ಯಾಣದಿಂದ ಫ್ರೀಡಂ ಪಾರ್ಕ್, ಬೆಂಗಳೂರುವರೆಗೆ ರಾಜ್ಯ ಮಟ್ಟದ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಅಂಗವಿಕಲ ಒಕ್ಕೂಟ ತಿಳಿಸಿದೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಅಧ್ಯಕ್ಷ ಶಿವಗೇನಿ ರಾಜಶೇಖರ್ ಮಾತನಾಡಿ, ''ಅಂಗವಿಕಲರ ನಡೆ ರಾಜಕೀಯ ಕಡೆ'' ಎಂಬ ಘೋಷಣೆಯೊಂದಿಗೆ ನಡೆಯಲಿರುವ ಈ ರ್‍ಯಾಲಿಯ ಮೂಲಕ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಹೇಳಿದರು.

1998ರಿಂದ ಅಂಗವಿಕಲರ ನಾನಾ ಬೇಡಿಕೆಗಳನ್ನು ಈಡೇರಿಸುವಂತೆ ಒಕ್ಕೂಟದಿಂದ ರಾಜ್ಯ ಸರ್ಕಾರಕ್ಕೆ ಅನೇಕ ಬಾರಿ ಮನವಿ



ಸಲ್ಲಿಸಿದ್ದರೂ ಅವುಗಳನ್ನು ಅನುಷ್ಠಾನಗೊಳಿಸಲಾಗಿಲ್ಲ ಎಂದು ಆರೋಪಿಸಿದರು. ರಾಜ್ಯದಲ್ಲಿ 21 ವಿಧದ ಅಂಗವಿಕಲತೆ ಹೊಂದಿರುವ 15 ಲಕ್ಷಕ್ಕೂ ಹೆಚ್ಚು ಜನರಿದ್ದು, ಅವರ ಬದುಕು ಸುಧಾರಣೆಗೆ ಸರ್ಕಾರಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪಕ್ಕದ ತಮಿಳುನಾಡು ರಾಜ್ಯದಲ್ಲಿ 2016ರ ಅಧಿನಿಯಮದಡಿ ಸ್ಥಳೀಯ ಸಂಸ್ಥೆಗಳಲ್ಲಿ ಶೇ.5 ರಾಜಕೀಯ ಮೀಸಲಾತಿ ಕಲ್ಪಿಸಿರುವಂತೆ, ಕರ್ನಾಟಕದಲ್ಲೂ ಅದೇ ರೀತಿಯ ಅವಕಾಶ ನೀಡಬೇಕು ಎಂದರು.

ಒಕ್ಕೂಟದ ಪ್ರಮುಖ ಬೇಡಿಕೆಗಳು: ಅಂಗವಿಕಲರ ಮಾಸಿಕ ಭತ್ಯೆಯನ್ನು ?5,000ರಿಂದ 6,000ಕ್ಕೆ ಹೆಚ್ಚಿಸುವುದು, ಶಕ್ತಿ ಯೋಜನೆಯಡಿ ಉಚಿತ ಬಸ್ ಪಾಸ್ ನೀಡುವುದು, ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಅಂಗವಿಕಲ ಮಕ್ಕಳಿಗೆ ಉಚಿತ ಶಿಕ್ಷಣ ಜಾರಿಗೊಳಿಸುವುದು, 202627ರ

3ನೇ ಪುಟಕ್ಕೆ

ಗೃಹ ಆರೋಗ್ಯ ಯೋಜನೆಯಡಿ ಮನೆ ಬಾಗಿಲಿಗೆ ಆರೋಗ್ಯ ಸೇವೆಗಳು

ವಿಶೇಷ ವರದಿ:

ಇತ್ತೀಚಿನ ದಿನಗಳಲ್ಲಿ ಜನರಲ್ಲಿ ವಿವಿಧ ಕಾರಣಗಳಿಂದಾಗಿ ಹೆಚ್ಚಿನ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಆಧುನಿಕ ಜೀವನ ಶೈಲಿ ಸೇರಿದಂತೆ ಅನೇಕ ಕಾರಣಗಳಿಂದ ಆರೋಗ್ಯ ಸಮಸ್ಯೆಗಳು ಗಂಭೀರವಾಗುತ್ತಿವೆ. ಇನ್ನು ಅನೇಕ ಆರೋಗ್ಯ ಸಮಸ್ಯೆಗಳಿಗೆ ರಕ್ತದೊತ್ತಡ ಮತ್ತು ಸಕ್ಕರೆ ಕಾಯಿಲೆ ಪ್ರಮುಖ ಕಾರಣವಾಗಿವೆ. ಆದರೆ ಹೆಚ್ಚಿನ ಜನರು ತಮಗೆ ಸಕ್ಕರೆ ಕಾಯಿಲೆ, ರಕ್ತದೊತ್ತಡ ಇದ್ದರೂ ತಪಾಸಣೆ ಮಾಡಿಸಿಕೊಳ್ಳುತ್ತಿಲ್ಲ, ಚಿಕಿತ್ಸೆ ಪಡೆದುಕೊಳ್ಳುತ್ತಿಲ್ಲ. ಇದಕ್ಕಾಗಿ ಕರ್ನಾಟಕ ಘನ ಸರಕಾರವು ಆರೋಗ್ಯ ಇಲಾಖೆಯ ಮೂಲಕ ರಾಜ್ಯದ ಜನರ ಆರೋಗ್ಯ ಕಾಪಾಡುವ ಉದ್ದೇಶದಿಂದ ಗೃಹ ಆರೋಗ್ಯ ಯೋಜನೆಯಡಿ 14 ಆರೋಗ್ಯ ಸೇವೆಗಳನ್ನು ಗ್ರಾಮೀಣ ಭಾಗದ ಜನತೆಗೆ ಒದಗಿಸಿದ ನಂತರ ಸದರಿ ಸೇವೆಗಳ ಸದುಪಯೋಗದ ಮಹತ್ವನ್ನರಿತು ನಗರ ಪ್ರದೇಶದ ಆರ್ಥಿಕ ದುರ್ಬಲ ವರ್ಗದ ಜನತೆಗೂ ಸಹ ಶೀಘ್ರದಲ್ಲಿಯೇ ಯೋಜನೆಯನ್ನು ವಿಸ್ತರಿಸಿ ಸೌಲಭ್ಯ ಒದಗಿಸಲು ಸನ್ಮಾನ್ಯ ಮುಖ್ಯಮಂತ್ರಿಗಳು ರವರ ಆದೇಶದಂತೆ ರಾಜ್ಯ ಸರ್ಕಾರವು ಅಗತ್ಯ ಸಿದ್ಧತೆ ಕೈಗೊಂಡಿದೆ.

2024ರ ಅಕ್ಟೋಬರ್ 24ರಂದು ಯೋಜನೆಗೆ ಕೋಲಾರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿತ್ತು. ರಾಜ್ಯ ಸರ್ಕಾರವು ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆಗಾಗಿ ಗೃಹ ಆರೋಗ್ಯ ಯೋಜನೆಯನ್ನು ಸರ್ಕಾರವು ನಂತರದಲ್ಲಿ ರಾಜ್ಯದಾದ್ಯಂತ ವಿಸ್ತರಿಸಿತು.



ಯೋಜನೆಯ ವಿಸ್ತರಣೆಯಿಂದಾಗಿ ರಾಜ್ಯದ ಎಲ್ಲಾ ಜನರಿಗೆ ಯೋಜನೆಯ ಪ್ರಯೋಜನ ಲಭ್ಯವಾಯಿತು. ಅತಿ ಶೀಘ್ರದಲ್ಲಿ ನಗರದ ಪ್ರದೇಶದ ಆರ್ಥಿಕ ದುರ್ಬಲ ವರ್ಗದವರಿಗೂ ಮನೆ ಬಾಗಿಲಿಗೆ ಆರೋಗ್ಯ ಸೇವೆಯನ್ನು ಒದಗಿಸಲಿದೆ. ಇದು ಕೇವಲ ರೋಗ ತಪಾಸಣೆಯಷ್ಟೇ ಅಲ್ಲದೇ ರೋಗ ಪೀಡಿತರಿಗೆ ಉಚಿತ ಔಷಧಿಗಳನ್ನು ಖಚಿತಪಡಿಸುತ್ತದೆ. ಈ ಯೋಜನೆಯಿಂದ ಏನೆಲ್ಲಾ ಸೌಲಭ್ಯಗಳಿವೆ? ಎಂಬುದನ್ನು ತಿಳಿಯೋಣ ಬನ್ನಿ.. ಯೋಜನೆಯ ಉದ್ದೇಶಗಳೇನು?

ಗೃಹ ಆರೋಗ್ಯ ಯೋಜನೆಯ ಮುಖ್ಯ ಉದ್ದೇಶವೆಂದರೆ ರೋಗಗಳನ್ನು ಶೀಘ್ರವಾಗಿ ಪತ್ತೆಹಚ್ಚುವುದು. ಇದು ಅಕಾಲಿಕ ಸಾವು ಮತ್ತು ಇತರ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟುವ ಗುರಿಯನ್ನು ಹೊಂದಿದೆ. ಮಧುಮೇಹ, ಅಧಿಕ ರಕ್ತದೊತ್ತಡ, ಸ್ತನ, ಗರ್ಭಕಂಠ ಮತ್ತು ಬಾಯಿಯ ಕ್ಯಾನ್ಸರ್ ಮುಂತಾದ ಸಾಂಕ್ರಾಮಿಕವಲ್ಲದ ಕಾಯಿಲೆಗಳನು (ಎನ್‌ಸಿಡಿ) ಹೆಚ್ಚಿನ ಚಿಕಿತ್ಸೆ ಗಾಗಿ ಪರೀಕ್ಷಿಸಲಾಗುತ್ತದೆ. ಈ ಯೋಜನೆಯು ಅಬ್ಸ್ಟ್ರಕ್ಟಿವ್ ಸ್ಲೀಪ್ ಅಪ್ನಿಯಾ (ಒಎಸ್‌ಒ) ಮತ್ತು ಇತರ ಮಾನಸಿಕ ಆರೋಗ್ಯ ಪರಿಸ್ಥಿತಿಗಳ ರೋಗಲಕ್ಷಣಗಳನ್ನು ಸಹ ಪರಿಶೀಲಿಸುತ್ತದೆ. ಅರ್ಹ ಪ್ರಕರಣಗಳಿಗೆ ಉಚಿತ ಔಷಧಿಗಳನ್ನು ಸಹ ಒದಗಿಸಲಾಗುವುದು.

ವರದಿಗಳ ಪ್ರಕಾರ ಒಟ್ಟು ಜನಸಂಖ್ಯೆಯ ಶೇ26.9 ರಷ್ಟು ಜನರು ಅಧಿಕ ರಕ್ತದೊತ್ತಡದಿಂದ ಬಳಲುತ್ತಿದ್ದಾರೆ. ಅಲ್ಲದೆ ಶೇ.15.6 ರಷ್ಟು ಜನರು ಮಧುಮೇಹದಿಂದ ಬಳಲುತ್ತಿದ್ದಾರೆ. ಇದೆಲ್ಲವನ್ನು ಮನಗಂಡು ಕರ್ನಾಟಕ ರಾಜ್ಯ ಸರ್ಕಾರ ಈ ಯೋಜನೆಯನ್ನು ಪ್ರಾರಂಭಿಸಿತು. ಈ ಸಂಖ್ಯೆಗಳನ್ನು ಕಡಿಮೆ ಮಾಡಲು ಮತ್ತು ಎಲ್ಲರನ್ನೂ ಆರೋಗ್ಯವಾಗಿಡಲು ಯೋಜನೆಯನ್ನು ಜಾರಿಗೊಳಿಸಲಾಗಿದೆ.

ಗೃಹ ಆರೋಗ್ಯ ಯೋಜನೆಯ ಪ್ರಯೋಜನಗಳು ಏನು?: ಗೃಹ ಆರೋಗ್ಯ ಯೋಜನೆಯು ಕರ್ನಾಟಕದ ಎಲ್ಲಾ ಜನರಿಗೆ ಅವರ ಮನೆ ಬಾಗಿಲಲ್ಲೇ ಆರೋಗ್ಯ ತಪಾಸಣೆಯನ್ನು ಖಚಿತಪಡಿಸುತ್ತದೆ. ಗೃಹ ಆರೋಗ್ಯ ಯೋಜನೆಯು ರೋಗಗಳನ್ನು ಮೊದಲೇ ಪತ್ತೆಹಚ್ಚುವುದನ್ನು ಖಚಿತಪಡಿಸುತ್ತದೆ ಮತ್ತು ಗಮನಾರ್ಹ ಆರೋಗ್ಯ ಸಮಸ್ಯೆಗಳು ಮತ್ತು ಅಕಾಲಿಕ ಮರಣಗಳನ್ನು ತಡೆಗಟ್ಟುತ್ತದೆ. ಅಗತ್ಯವಿರುವವರಿಗೆ ಉಚಿತ ಔಷಧಿಗಳನ್ನು ನೀಡಲಾಗುವುದು, ಚಿಕಿತ್ಸೆಯನ್ನು ಪಡೆಯಲು ಸಾಧ್ಯವಾಗದವರ ವೆಚ್ಚವನ್ನು ಸರ್ಕಾರ ಭರಿಸಲಿದ್ದು, ಈ ಯೋಜನೆ ಆರ್ಥಿಕವಾಗಿ ಹಿಂದುಳಿದವರಿಗೆ ವರದಾನವಾಗಿದೆ. ರೋಗಗಳು ಪತ್ತೆಯಾದ ನಂತರ, ಜನರು ವಿಶೇಷ ಚಿಕಿತ್ಸೆ ಗಾಗಿ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಕಳುಹಿಸಿ ಕೊಡಲಾಗುವುದು.

ಗೃಹ ಆರೋಗ್ಯ ಯೋಜನೆಯ ಪ್ರಮುಖ ಅಂಶಗಳು: ಗೃಹ ಆರೋಗ್ಯ ಯೋಜನೆ, ಕರ್ನಾಟಕದ ಅತಿದೊಡ್ಡ ಆರೋಗ್ಯ ರಕ್ಷಣಾ ಉಪಕ್ರಮಗಳಲ್ಲಿ ಒಂದಾಗಿದ್ದು, ತನ್ನ ಎಲ್ಲಾ ನಾಗರಿಕರನ್ನು ಒಳಗೊಳ್ಳುತ್ತದೆ. ಕರ್ನಾಟಕ ರಾಜ್ಯ ಸರ್ಕಾರವು 15ನೇಯ ಹಣಕಾಸು ಯೋಜನೆಯಡಿ ಅನುಷ್ಠಾನ ಮಾಡುತ್ತಿದ್ದು, ಯೋಜನೆಯಡಿ ಆರಂಭದಲ್ಲಿ ಜಿಲ್ಲೆಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಾದ ರಾಯಚೂರು, ಸಿಂಧನೂರು ನಗರ ವ್ಯಾಪ್ತಿಯ ಸುಮಾರು 1,04,342 ಜನರ ತಪಾಸಣೆ ಕೈಗೊಂಡು, ಅವರಲ್ಲಿ ಮೂವತ್ತು ವರ್ಷಕ್ಕಿಂತ ಮೇಲ್ಪಟ್ಟ ಸುಮಾರು 41,757 ಜನರಿಗೆ ಸೇವೆ ಒದಗಸುವ ಗುರಿಯನ್ನು ಹೊಂದಿದೆ.

ಇದಕ್ಕಾಗಿ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆರು ಪ್ರತಿದಿನ ಮನೆಗೆ ಭೇಟಿ ನೀಡಿ ನಿಗದಿತ ನಮೂನೆಯ ಪ್ರಶ್ನಾವಳಿಗಳ ಮೂಲಕ ರೋಗ ಸಮಸ್ಯೆ ಪತ್ತೆ ಹಚ್ಚಲು ಸಮಾಲೋಚನೆ ನಡೆಸಲಿದ್ದಾರೆ. ತದ ನಂತರ ಉಚಿತ ಆರೋಗ್ಯ ತಪಾಸಣೆ ಕೈಗೊಂಡು ಚಿಕಿತ್ಸೆಯ ಭಾಗವಾಗಿ ಉಚಿತ ಔಷಧಿಗಳನ್ನು ಸಹ ನೀಡಲಾಗುವುದು.

ಹೆಚ್ಚಿನ ಚಿಕಿತ್ಸೆ : ಆರೋಗ್ಯ ತಪಾಸಣೆಯ ಬಳಿಕ ರೋಗಿಗೆ ಚಿಕಿತ್ಸೆಯ

3ನೇ ಪುಟಕ್ಕೆ

ಕ್ರೀಡೆ ಎಂಬುವುದು ಕೇವಲ ಗೆಲುವು- ಸೋಲಲ್ಲ, ಅದು ಶಿಸ್ತು ಮತ್ತು ದೈಹಿಕ ಸದೃಢತೆಯ ಸಂಕೇತ-ಜಂಟಿ ನಿರ್ದೇಶಕ ರವೀಂದ್ರನಾಥ ಬಾಳ್ಳಿ



ಕಲಬುರಗಿ,ಫೆ.17-

ಕ್ರೀಡೆ ಎಂಬುವುದು ಕೇವಲ ಗೆಲುವು-ಸೋಲಲ್ಲ, ಅದು ಶಿಸ್ತು ಮತ್ತು ದೈಹಿಕ ಸದೃಢತೆಯ ಸಂಕೇತ. ಕ್ರೀಡೆ ಎಂಬುದು ಹಬ್ಬದ ವಾತಾವರಣವಿದ್ದಂತೆ ಅದನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡು ರಾಜ್ಯ ರಾಷ್ಟ್ರಮಟ್ಟದಲ್ಲಿ ಗೆಲುವು ಸಾಧಿಸಿದರೆ ಸರ್ಕಾರಿ ಕೋಟಾದಲ್ಲಿ ಮೀಸಲಾತಿ ಅನ್ವಯ ಉದ್ಯೋಗ ದೊರೆಯುತ್ತದೆ. ಇನಸ್ಟಿಟ್ಯೂಟ್ ಆಫ್ ಟ್ರೈನಿಂಗ್ ಆಫ್ ಟ್ರೈನರ್ಸ್ (ಐ.ಟಿ.ಓ.ಟಿ), ದಾವಣಗೆರೆಯ ಜಂಟಿ ನಿರ್ದೇಶಕರಾದ ರವೀಂದ್ರನಾಥ ಬಾಳ್ಳಿ ಅವರು ಹೇಳಿದರು.

ಸೋಮವಾರದಂದು ನಡೆಯುವ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಫೆಬ್ರವರಿ 16 ರಿಂದ 18 ರವರೆಗೆ ಆಯೋಜಿಸಿದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪುರುಷ) ಕಲಬರುಗಿ, ನೋಡಲ್ ಅಧೀನದಲ್ಲಿ ಜಿಲ್ಲೆಯ ಸರಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ತರಬೇತಿದಾರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಬಲೂನ ಹಾರಿಬಿಡುವುದರ ಮೂಲಕ ಚಾಲನೆ ನೀಡಿದರು. ಕ್ರೀಡಾಕೂಟದಲ್ಲಿ ಅಥ್ಲೇಟಿಕ್ಸ್, ಕಬ್ಬಡ್ಡಿ, ವಾಲಿಬಾಲ್, ಕ್ರಿಕ್ರೇಟ್, ಥ್ರೋ ಬಾಲ್ ಮುಂತಾದ ಕ್ರೀಡೆಗಳನ್ನು ಆಯೋಜಿಸಲಾಗಿದ್ದು ಇದರ ಸದುಪಯೋಗ ಪಡೆಯಲು ಕರೆ ನೀಡಿದರು.

ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪು), ಕಲಬುರಗಿಯ ಪ್ರಾಚಾರ್ಯರಾದ ಮುರಲಿಧರ ರತ್ನಗಿರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಆರೋಗ್ಯವೇ ಭಾಗ್ಯ ಎಂಬ ಗಾದೆಯಂತೆ, ಮನುಷ್ಯನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಕ್ರೀಡೆ ಅತ್ಯಗತ್ಯ. ಕೇವಲ ಪಠ್ಯಪುಸ್ತಕದ ಜ್ಞಾನದಿಂದ ಜೀವನ ಪೂರ್ಣವಾಗುವುದಿಲ್ಲ, ಮೈದಾನದಲ್ಲಿ ಆಡುವ ಆಟಗಳು ನಮಗೆ ಶಿಸ್ತು, ಸಹನೆ ಮತ್ತು ತಂಡದೊಂದಿಗೆ ಕೆಲಸ ಮಾಡುವ ಚಾಕಚಕ್ಯತೆಯನ್ನು ಕಲಿಸಿಕೊಡುತ್ತವೆ. ಎಂದು ಹೇಳಿದರು.

ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದಿನದ 24 ಗಂಟೆಯಲ್ಲಿ 1 ಗಂಟೆಯಾದರೂ ಕ್ರೀಡೆಯಲ್ಲಿ ಭಾಗವಹಿಸಿ ಆರೋಗ್ಯಕ್ಕೆ ಲಕ್ಷಕೋಡಬೇಕು. ಇಂದಿನ ಕ್ರೀಡಾಕೂಟದಲ್ಲಿ ಸುಮಾರು 11 ಸಂಸ್ಥೆಗಳು ಭಾಗವಿಸಿದ್ದು ಹಾಗೂ 600 ತರಬೇತುದಾರರು ಭಾಗವಹಿಸಿದ್ದು ನಮಗೆ ಖುಷಿ ತಂದಿದೆ ಎಂದು ಪ್ರಾಸ್ಥಾವಿಕ ನುಡಿ ಮಾತನಾಡಿದರು.

ಕಲಬುರಗಿ ಕಛೇರಿಯ ವಿಭಾಗೀಯ ಉಪ ನಿರ್ದೇಶಕರಾದ ರುಬೀನಾ ಪರ್ವೀನ ಮಾತನಾಡಿ, ನನ್ನ ಪ್ರೀತಿಯ ವಿದ್ಯಾರ್ಥಿಗಳೇ, ಕ್ರೀಡೆ ಅಂದ್ರೆ ಹರ್ಷ, ಉಲ್ಲಾಸ, ಖುಷಿ, ಕೇವಲ 3 ದಿನ ಆಟ ಆಡಿ ಮರೋದಲ್ಲ ಫಿಟನೆಸನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅದು ಜೀವನದ ಅತ್ಯಂತ ದೊಡ್ಡ ಸಾಧನೆ ಆಗಬೇಕು, ಕ್ರೀಡೆಯನ್ನು ಹಬ್ಬಗಳಂತೆ ಆಚರಿಸಬೇಕು. ಮೈದಾನಕ್ಕೆ ಇಳಿದ ಮೇಲೆ ಗೆಲ್ಲಲೇಬೇಕು ಎಂಬ ಛಲವಿರಲಿ. ಆದರೆ ನೆನಪಿಡಿ, ಗೆಲುವಿಗಿಂತಲೂ 'ಭಾಗವಹಿಸುವಿಕೆ' (ಕಚಿಡಿಣಛಿiಠಿಚಿಣಠಿ) ಅತಿ ದೊಡ್ಡದು. ಸೋತಾಗ ಕುಗ್ಗಬೇಡಿ, ಅದು ಮುಂದಿನ ಗೆಲುವಿನ ಪಾಠ. ಗೆದ್ದಾಗ ಬೀಗಬೇಡಿ, ಅದು ನಿಮ್ಮ ಶ್ರಮಕ್ಕೆ ಸಿಕ್ಕ ಗೌರವ ಎಂದು ಹೇಳಿದರು. ತರಬೇತಿ ಅಧಿಕಾರಿಯಾದ ಭಾರತಿ ಅವರು ಸ್ವಾಗತ ಮಾಡಿದರು. ಕಿರಿಯ ತರಬೇತಿ ಅಧಿಕಾರಿಯಾದ ವಿಜಯಕುಮಾರ ಮೇಳಕುಂದಿ ಅವರು ನಿರೂಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ಕೆ.ಜಿ.ಟಿ.ಟಿ.ಐ ಕಲಬುರಗಿಯ ನಿರ್ದೇಶಕರಾದ ರಾಜೇಶ ಬಾವಗಿ, ಆದರ್ಶ ಶಿಕ್ಷಣ ಸಂಸ್ಥೆಯ ಸಂಯೋಜಕರಾದ ಬಸವರಾಜ ಯಲ್ವೇರಿ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪುರುಷರ ಕಲಬುರಗಿ ಹಾಗೂ ಸರಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷರಾದ ಸುರೇಶ ವಗ್ಗೆ, ವಿ.ಇ.ಎಸ್, ಕೈ.ತ.ಸಂಸ್ಥೆ ಕಲಬುರಗಿಯ ಪ್ರಾಚಾರ್ಯರಾದ ಶಕೀಲ ಅನ್ಸಾರಿ ಮತ್ತು ಸಿಬ್ಬಂದಿ ವರ್ಗದವರು, ಹಾಗೂ ಸರ್ಕಾರಿ, ಅನುದಾನಿತ ಸಂಸ್ಥೆಯ ಮುಖ್ಯಸ್ಥರು, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೂರ್ಛೆ ರೋಗದ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸೋಣ-ಡಾ.ಕಿರಣ ಪಾಟೀಲ



ಬೀದರ, ಫೆ.17-

ಅಪಸ್ಮಾರ ಅಥವಾ ಮೂರ್ಛೆ ರೋಗದ ಬಗ್ಗೆ ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವುದು, ರೋಗಿಗಳಿಗೆ ಸೂಕ್ತ ಚಿಕಿತ್ಸೆ ಸಿಗುವಂತೆ ಮಾಡುವುದು ಮತ್ತು ಅವರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ಕಿರಣ ಪಾಟೀಲ ಹೇಳಿದರು.

ಅವರು ಇತ್ತೀಚಿಗೆ ಜಿಲ್ಲಾ ಕುಷ್ಠರೋಗ ಅಧಿಕಾರಿಗಳ ಕಾರ್ಯಾಲಯದಲ್ಲಿ ಕರ್ನಾಟಕ ಮೇದುಳು ಆರೋಗ್ಯ ಉಪಕ್ರಮದಡಿ ಯಲ್ಲಿ ಅಂತರಾಷ್ಟ್ರೀಯ ಮೂರ್ಛರೋಗ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮೂರ್ಛರೋಗ ಕುರಿತು ಜನಜಾಗೃತಿ ಮೂಡಿಸುವುದು ಮತ್ತು ಸಮಾಜದಲ್ಲಿರುವ ಕಳಂಕವನ್ನು ದೂರ ಮಾಡಿವುದೇ ಇದರ ಉದ್ದೇಶವಾಗಿದೆ. ಅಪಸ್ಮಾರದ ಬಗ್ಗೆ ಕೆಲವು ಮುಖ್ಯ ಸಂಗತಿಗಳು ಅಪಸ್ಮಾರವು ಕೇವಲ ಒಂದು ಆರೋಗ್ಯ ಸಮಸ್ಯೆಯಲ್ಲಿ ಇದು ಸಾಮಾಜಿಕವಾಗಿಯೂ ರೋಗಿಗಳ ಮೇಲ ಪರಿಣಾಮ ಬೀರುತ್ತದೆ. ವಿಶ್ವದಾದ್ಯಂತ ಸುಮಾರು 50 ಮಿಲಿಯನ್ ಜನರು ಈ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಚಿಕಿತ್ಸೆ ಸರಿಯಾದ ಔಷಧೋಪಚಾರ ಮತ್ತು ವೈದ್ಯಕೀಯ ಸಲಹೆಯಿಂದ ಶೇ.70 ರಷ್ಟು ಪ್ರಕರಣಗಳನ್ನು ನಿಯಂತ್ರಿಸಬಹುದು ಮೂಢನಂಬಿಕೆ ಅಪಸ್ಮಾರವು ಯಾವುದೇ ಶಾಪ ಅಥವಾ ದೈವಿಕ ಕೊಪವಲ್ಲ ,ಇದೊಂದು ನರವೈಜ್ಞಾನಿಕ ಕಾಯಿಲೆ ಇದರ ಮುಖ್ಯ ಉದ್ದೇಶವಾಗಿದೆ ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸಂಗಪ್ಪ ಕಾಂಬ್ಳೆ ಅವರು ಎಲ್ಲಾ ಸಿಬ್ಬಂದಿ ವರ್ಗದವರಿಗೆ ಪ್ರತಿಜ್ಞೆ ಮಾಡಿಸಿದರು.

ಈ ಸಂದರ್ಭದಲ್ಲಿ ಡಾ.ಶಿವಶಂಕರ. ಬಿ.ಆರ್.ಸಿ.ಎಚ್ ಅಧಿಕಾರಿಗಳು ಹಾಗೂ ಡಾ.ರಾಜಶೇರ ಪಾಟೀಲ ಡಿ.ವಿ.ಬಿ.ಡಿ.ಸಿ.ಓ ಅಧಿಕಾರಿಗಳು ಹಾಗೂ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವೀರಶೆಟ್ಟಿ ಚನ್ನಶೆಟ್ಟಿ, ರಾಕೇಶ, ನಿಕಿತಾ, ಯೋಗೇಶ, ರಾಜಕುಮಾರ, ಗೋರಖನಾಥ, ಇಮಾನುವೇಲ್, ಬ್ರಮಾರಂಭಾದೇವಿ, ಜ್ಯೋತಿ ಸಂಜು ಸೇರಿದಂತೆ ಅಧಿಕಾರಿ ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

ಆಹಾರ ವಾಹಿನಿ ಯೋಜನೆಯಡಿ ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಬೀದರ, ಫೆಬ್ರವರಿ.16 (ಕರ್ನಾಟಕ ವಾರ್ತೆ):- ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದ ವತಿಯಿಂದ 2025-26ನೇ ಸಾಲಿಗೆ ಆಹಾರ ವಾಹಿನಿ ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಕೆಗಳನ್ನು ನಾಲ್ಕು ಚಕ್ರಗಳ ಇವಿ-ಗೂಡ್ಸ್ ವಾಹನಗಳನ್ನು ಅಗತ್ಯಕ್ಕೆ ತಕ್ಕಂತೆ ನವೀಕರಿಸಿ ಫಲಾನುಭವಿಗಳಿಗೆ ವಿತರಿಸುವ ಯೋಜನೆಯಾಗಿದ್ದು, ನಿಗಮದಿಂದ ವಾಹನ ಖರೀದಿಗೆ ರೂ. 3.00 ಲಕ್ಷಗಳ ಸಹಾಯಧನವನ್ನು ಪಡೆಯಲು ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ಈ ಯೋಜನೆಯು ಹಿಂದುಳಿದ ವರ್ಗಗಳ ಪ್ರವರ್ಗ-3ಎ ನಲ್ಲಿ ಬರುವ ಒಕ್ಕಲಿಗ ಸಮುದಾಯಗಳಿಗೆ ಸೇರಿದ ಒಕ್ಕಲಿಗ, ವಕ್ಕಲಿಗ, ಸರ್ಪಒಕ್ಕಲಿಗ, ಹಳ್ಳಿಕಾರ್ಒಕ್ಕಲಿಗ,ನಾಮಧಾರಿ ಒಕ್ಕಲಿಗ, ಗಂಗಡ್‌ಕಾರ್ಒಕ್ಕಲಿಗ, ದಾಸ್ ಒಕ್ಕಲಿಗ, ರೆಡ್ಡಿ ಒಕ್ಕಲಿಗ, ಮರಸು ಒಕ್ಕಲಿಗ, ಗೌಡ/ಗೌಡ ಹಳ್ಳಿಕಾರ್, ಕುಂಚಿಟಿಗ, ಗೌರ, ಕಾಪು, ಹೆಗ್ಗಡೆ, ಕಮ್ಮ, ರೆಡ್ಡೇಇ, ಗೌಂಡರ್, ನಾಮಧಾರಿಗೌಡ, ಉಪ್ಪಿನಕೊಳಗ, ಉತ್ತಮಕೊಳಗ ಸಮುದಾಯಗಳಿಗೆ ಅನ್ವಯವಾಗುತ್ತದೆ. ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ಆಧಾರ ಕಾರ್ಡಿನಲ್ಲಿರುವಂತೆ ಅರ್ಜಿದಾರರ ಹೆಸರು ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿ ಯೂ ಇರುವಂತೆ ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದೇ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸುವಂತಿಲ್ಲ.

ಆಸಕ್ತರು ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಜಾಲತಾಣ ಅಥವಾ ನಿಗಮದ ದೂರವಾಣಿ ಸಂಖ್ಯೆ: 080-2990 4350, 29904268 ನ್ನು ಸಂಪರ್ಕಿಸುವುದು. ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ನಂ. 9-8-30, ಬಿ.ವ್ವಿ.ಬಿ.ಕಾಲೇಜು ರಸ್ತೆ, ಗುನಳ್ಳಿ ಕಾಂಪ್ಲೇಕ್ಸ್, 1ನೇ ಕ್ರಾಸ್ ರೋಡ, ಗಣೇಶ ಮಂದಿರ ಹತ್ತಿರ, ವಿದ್ಯಾನಗರ ಕಾಲೋನಿ, ಬೀದರ ದೂರವಾಣಿ ಸಂಖ್ಯೆ: 08482-223515 ಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಗಮದ ಅಧ್ಯಕ್ಷರಿಂದ ಮೃತ ನೌಕರರ ವಾರಸುದಾರರಿಗೆ 2.30 ಕೋಟಿ ರೂ.ಗಳ ಪರಿಹಾರದ ಮೊತ್ತದ ಚೆಕ್ ಹಸ್ತಾಂತರ



ಕಲಬುರಗಿ,ಫೆ.17-

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಸೇವೆ ಸಲ್ಲಿಸುತ್ತಿರುವಾಗಲೇ ಅಕಾಲಿಕ ನಿಧನ ಹೊಂದಿದ ನೌಕರರ ಅವಲಂಬಿತ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಸೋಮವಾರ ನಗರದ ಕೆಕೆಆರ್‌ಟಿಸಿ ಪ್ರಧಾನ ಕಚೇರಿಯಲ್ಲಿ ಆಂತರಿಕ ಗುಂಪು ವಿಮೆ ಯೋಜನೆಯಡಿ ಸಹಾಯಧನ ಪರಿಹಾರದ ಚೆಕ್ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ, ನಿಗಮದ ಅಧ್ಯಕ್ಷ ಅರುಣಕುಮಾರ ಪಾಟೀಲ ಹಾಗೂ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ ಸುಶೀಲ್ ಅವರು ಮೃತ ನೌಕರರ 23 ವಾರಸುದಾರರಿಗೆ (ಪ್ರತಿಯೊಬ್ಬ ವಾರಸುದಾರರಿಗೆ 10 ಲಕ್ಷ ರೂ.ರಂತೆ) ಒಟ್ಟು 2.30 ಕೋಟಿ ರೂ.ಗಳ ಪರಿಹಾರದ ಮೊತ್ತದ ಚೆಕ್‌ನ್ನು ಹಸ್ತಾಂತರಿಸಿದರು.

ಸಾರಿಗೆ ನಿಗಮದ ವ್ಯಾಪ್ತಿಯ ಕಲಬುರಗಿ ವಿಭಾಗ-1 ಹಾಗೂ ವಿಭಾಗ-2ರಲ್ಲಿ ಕಾರ್ಯನಿರ್ವಹಿಸುತ್ತಿದ್ದ ನೌಕರರ ಪೈಕಿ ಇತ್ತೀಚೆಗೆ ನಿಧನರಾದ ಚೆನ್ನಮಲ್ಲಪ್ಪ ಅವರ ಪತ್ನಿ ಶೋಭಾ, ಬಾಬು ಅವರ ಪತ್ನಿ ಶಾಂತಾಬಾಯಿ, ವೀರಭದ್ರಯ್ಯ ಅವರ ಪತ್ನಿ ತನುಜಾ, ಪ್ರದೀಪಕುಮಾರ್ ಪತ್ನಿ ಜ್ಯೋತಿ, ಶರಣು ಅವರ ಪತ್ನಿ ಶಾಂತಾಬಾಯಿ, ತಾಯಿ ಸಾವಿತ್ರಿ ಹಾಗೂ ಮಗಳು ಭಾಗ್ಯಲಕ್ಷ್ಮಿ, ಸಿದ್ದೇಶ್ವರ ಅವರ ಅಣ್ಣಂದಿರಾದ ಹಣಮಂತ, ಅಶೋಕ್ ಹಾಗೂ ತಂಗಿ ಭಾರತಿ, ಜಗನ್ನಾಥ ಅವರ ಪತ್ನಿ, ದಯಾನಂದ ಅವರ ಪತ್ನಿ ಮಹಾನಂದ, ಚಂದ್ರಕಾಂತ್ ಅವರ ಪತ್ನಿ ರಾಜೇಶ್ವರಿ, ಮಲ್ಲಪ್ಪ ಅವರ ಪತ್ನಿ ಗುರುಬಾಯಿ, ಮಹಾದೇವಪ್ಪ ಅವರ ಪತ್ನಿ ಲಲಿತಾ ಕುಮಾರಿ, ಮಾಹಾರುದ್ರಾ ಅವರ ಪತ್ನಿ ಪವಿತ್ರಭಾಯಿ, ಗೋಪಾಲ್ ಅವರ ಪತ್ನಿ ಲಕ್ಮಿ ಅವರು ಸೇರಿ ವಿಜಯಪುರ, ಕೊಪ್ಪಳ, ರಾಯಚೂರು, ಬಳ್ಳಾರಿ, ಬೀದರ್ ಹಾಗೂ ಯಾದಗಿರಿ ವಿಭಾಗಗಳ ಒಟ್ಟು 23 ನೌಕರರ ಕುಟುಂಬಸ್ಥರಿಗೆ ಪರಿಹಾರ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಅರುಣ್ ಪಾಟೀಲ್, ಸಂಸ್ಥೆಯ ಬೆಳವಣಿಗೆಗೆ ಶ್ರಮಿಸಿದ ನೌಕರರ ಅಗಲಿಕೆ ತುಂಬಲಾರದ ನಷ್ಟವಾಗಿದೆ. ಕುಟುಂಬ ನಡೆಸುತ್ತಿದ್ದ ಆಧಾರವನ್ನೇ ಕಳೆದುಕೊಂಡ ಕುಟುಂಬಕ್ಕೆ ಪರಿಹಾರದ ಚೆಕ್ ದೊಡ್ಡದಲ್ಲ. ಅವರ ಕುಟುಂಬದವರ ಸಂಕಷ್ಟಕ್ಕೆ ಸ್ಪಂದಿಸುವುದು ನಮ್ಮ ಜವಾಬ್ದಾರಿಯಾಗಿದ್ದು, ವಿಮಾ ಯೋಜನೆಯ ಮೂಲಕ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದರು.

ನಿಗಮವು ಯಾವಾಗಲೂ ನೌಕರರ ಕುಟುಂಬದ ಜತೆಗೆ ನಿಲ್ಲಲಿದೆ. ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಭವಿಷ್ಯ ರೂಪಿಸುವ ಕಡೆಗೆ ಗಮನ ನೀಡಿ, ಏನೇ ಸಮಸ್ಯೆ ಇದ್ದರು, ಸಹ ಸಾರಿಗೆ ನಿಗಮದ ಸಂಪರ್ಕದಲ್ಲಿ ಇರಿ, ಸಂಸ್ಥೆ ನಿಮ್ಮೊಂದಿಗೆ ಇರಲಿದೆ ಎಂದು ಭರವಸೆಯ ನೀಡಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲ ಅವರು ಮಾತನಾಡಿ, ಕರ್ತವ್ಯ ಸಲ್ಲಿಸುತ್ತಿರುವಾಗಲೇ ನಿಧನವಾದ ಕುಟುಂಬಗಳಿಗೆ ಈ ಹಿಂದೇ ಆಂತರಿಕ ಗುಂಪು ವಿಮೆ ಯೋಜನೆಯಡಿ 10 ಲಕ್ಷ ಪರಿಹಾರ ನೀಡಲಾಗುತ್ತಿತ್ತು. ಅದನ್ನು ಮರುಪರಿಶೀಲಿಸಿ, ಬೋರ್ಡ್ ಸಭೆಯಲ್ಲಿ ತೀರ್ಮಾನಿಸಿ 12.50 ಲಕ್ಷಕ್ಕೆ ಏರಿಸಲಾಗಿದೆ. ಫೆಬ್ರವರಿ 1ರಿಂದ ಈ ನಿಯಮ ಅನ್ವಯ ಆಗಲಿದೆ. ನಿಗಮದ ಆರ್ಥಿಕ ಪರಿಸ್ಥಿತಿ ನೋಡಿಕೊಂಡು ಪರಿಹಾರ ಮೊತ್ತ ನೀಡಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೆಕೆಆರ್‌ಟಿಸಿ ಹಿರಿಯ ಅಧಿಕಾರಿಗಳಾದ ಸುನೀಲಕುಮಾರ್ ಚಂದ್ರಕಿ, ಗಂಗಾಧರ್, ಸಂತೋಷ್ ಗೋಗೇರಿ, ಚಂದ್ರಕಾಂತ್ ಪುಲಾರೆ, ಬಸವರಾಜ್ ಬೆಳಗಾವಿ, ಜಗದೀಶ್, ಬೋರಯ್ಯ, ಮಹಿಪಾಲ್ ಬೇಗಾರ್ ಸೇರಿ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.



ಸಂತ ಸೇವಾಲಾಲ್ ರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ- ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ

ಯಾದಗಿರಿ, ಫೆ.17-

ಸಂತಸೇವಾಲಾಲ್ ಅವರು ಇಡೀ ಸಮಾಜಕ್ಕೆ ಒಳಿತನ್ನು ಬಯಸಿ ಶಾಂತಿಯ ಸಂದೇಶ ಸಾರಿದವರು. ಅಂತಹ ಮಹಾನ್ ಪುರುಷರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಹೇಳಿದರು.

ನಗರದ ಪದವಿ ಕಾಲೇಜು ಸಭಾಂಗಣದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಪ್ರದೇಶ ಬಂಜಾರ (ಲಂಬಾಣಿ) ಸೇವಾ ಸಂಘ, ಬಂಜಾರ ಸಮಾಜ ಕಲಗುರು ಶ್ರೀ ಸಂತ ಸೇವಾಲ್ ಮಹಾರಾಜರ 287ನೇ ಜಯಂತ್ರೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಂತ ಸೇವಾಲಾಲರಂತಹ ದಾರ್ಶನಿಕರು ಒಂದು ಜಾತಿಗೆ ಸೀಮಿತರಲ್ಲ. ಅವರು ಬಂಜಾರ ಸಮಾಜ ಸುಧಾರಣೆ ಮತ್ತು ಅಭಿವೃದ್ಧಿಗಾಗಿ ಬಹಳಷ್ಟು ಉತ್ತಮ ಸಂದೇಶ ನೀಡಿದ್ದಾರೆ. ಇವರ ವಚನ, ಸಂದೇಶಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಪ್ರತಿಯೊಬ್ಬರೂ ಶಿಕ್ಷಣವಂತರಾದಾಗ ಮಾತ್ರ ಸಮಾಜ ಏಳ್ಗೆ ಹೊಂದಲು ಸಾಧ್ಯ. ಆದ್ದರಿಂದ ಸಮಾಜದ ಜನತೆ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ತಿಳಿಸಿದರು.

ಡಿಗ್ರಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಸುಭಾಶ್ಚಂದ್ರ ಕೌಲಗಿ ಮಾತನಾಡಿ, ನಮ್ಮ ದೇಶದಲ್ಲಿ ಗುರು ಪರಂಪರೆಗೆ ವಿಶೇಷ ಸ್ಥಾನವಿದ್ದು, ಬಂಜಾರ ಸಮಾಜದ ಗುರುಗಳಾದ ಸಂತ ಸೇವಾಲಾಲರು ಸತ್ಯ, ನಿಷ್ಠೆ ಮತ್ತು ಪ್ರಾಮಾಣಿಕತೆಗೆ ಹೆಸರಾದವರು. ಬಂಜಾರ ಸಮಾಜದವರು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ವಿಶೇಷವಾಗಿ ಹೆಣ್ಣು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಹಾಗೂ ಆರೋಗ್ಯದ ಕಡೆ ಗಮನ ಕೊಡಬೇಕು ಎಂದು ಕಿವಿ ಮಾತು ಹೇಳಿದರು.

ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಇದ್ದರು.

ಅಮರೇಶ್ವರ ಜಾತ್ರಾ ಮಹೋತ್ಸವದಲ್ಲಿ ಶಾಸಕ ಪ್ರಭು ಚವ್ಹಾಣ ಭಾಗಿ



ಔರಾದ, ಫೆ.17-

ಔರಾದನ ಸುಕ್ಷೇತ್ರ ಉದ್ಭವಲಿಂಗ ಅಮರೇಶ್ವರ ಜಾತ್ರಾ ಮಹೋತ್ಸವದಲ್ಲಿ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಫೆ.16 ರಂದು ಭಕ್ತಿಭಾವದಿಂದ ಪಾಲ್ಗೊಂಡು ನಾಡಿನೊಳಿತಿಗಾಗಿ ಪ್ರಾರ್ಥಿಸಿದರು.

ಬೆಳಿಗ್ಗೆ ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಪವಿತ್ರ ಪಲ್ಲಕ್ಕಿ ಮೆರವಣಿಗೆಯಲ್ಲಿ ಭಾಗವಹಿಸಿ ಭಕ್ತರೊಂದಿಗೆ ಸಾಗಿದರು. ಈ ವೇಳೆ ಭಕ್ತಾದಿಗಳ ಜೊತೆಗೆ ತಮಟೆ ಕಲಾವಿದರ ವಾದನಕ್ಕೆ ಹೆಜ್ಜೆ ಹಾಕಿ ಸಂಭ್ರಮಿಸಿದರು. ಜಾತ್ರಾ ಮಹೋತ್ಸವದ ಅಂಗವಾಗಿ ನಡೆಯುವ ಅಗ್ನಿ ಪೂಜೆಯಲ್ಲಿ ಪಾಲ್ಗೊಂಡು ಭಕ್ತಿಭಾವ ಮೆರೆದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಸುಕ್ಷೇತ್ರ ಉದ್ಭವಲಿಂಗ ಅಮರೇಶ್ವರ ದೇವಸ್ಥಾನ ಔರಾದನ ಆರಾಧ್ಯವ, ಪ್ರಾಚೀನ ಮತ್ತು ಐತಿಹಾಸಿಕ ದೇವಸ್ಥಾನವಾಗಿದ್ದು, ನಂಬಿ ಬಂದ ಭಕ್ತರ ಎಲ್ಲ ಬೇಡಿಕೆಗಳು ಇಲ್ಲಿ ಈಡೇರುತ್ತವೆ. ಎಲ್ಲ ಸಂಕಷ್ಟಗಳನ್ನು ದೂರ ಮಾಡುವ ಪುಣ್ಯ ಕ್ಷೇತ್ರ ಇದಾಗಿದ್ದು, ವರ್ಷಕ್ಕೊಮ್ಮೆ ಅತ್ಯಂತ ಅದ್ದೂರಿಯಾಗಿ ಮತ್ತು ಸಂಭ್ರಮದಿಂದ ನಡೆಯುವ ಜಾತ್ರೆಗೆ ಕರ್ನಾಟಕ ಸೇರಿದಂತೆ ಪಕ್ಕದ ತರಲಂಗಾಣಾ, ಮಹಾರಾಷ್ಟ್ರದಿಂದಲೂ ಲಕ್ಷಾಂತರ ಭಕ್ತರು ಆಗಮಿಸಿ ಪುನೀತರಾಗುತ್ತಾರೆ ಎಂದರು.

ಈ ಜಾತ್ರೆ ಕೇವಲ ಧಾರ್ಮಿಕ ಆಚರಣೆ ಮಾತ್ರವಲ್ಲ, ನಮ್ಮ ಸಂಸ್ಕೃತಿ, ಪರಂಪರೆಯ ಭಾಗವಾಗಿದೆ. ಕ್ಷೇತ್ರದ ಎಲ್ಲ ಜನ ಒಟ್ಟಿ ಸೇರುವ ಒಗ್ಗಟ್ಟಿನ ಸಂಕೇತವೂ ಆಗಿದೆ. ಅಮರೇಶ್ವರರ ಕೃಪೆಯಿಂದ ನಮ್ಮ ಕ್ಷೇತ್ರದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಅಭಿವೃದ್ಧಿ ಸದಾ ನೆಲೆಸಿದೆ. ಮುಂದಿನ ದಿನಗಳಲ್ಲಿಯೂ ಉತ್ತಮ ಮಳೆ, ಸಮೃದ್ಧ ಬೆಳೆ, ಮಹಾಜನತೆಯ ಸುಖ, ಶಾಂತಿ, ನೆಮ್ಮದಿ ಹಾಗೂ ಕ್ಷೇತ್ರದ ಸಮೃದ್ಧಿಗಾಗಿ ದೇವರಲ್ಲಿ ಬೇಡಿಕೊಂಡಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಮಾರುತಿ ಚವ್ಹಾಣ, ಶಿವಾಜಿರಾವ ಪಾಟೀಲ ಮುಂಗನಾಳ, ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಕೇರಬಾ ಪವಾರ, ಅಶೋಕ ಅಲ್ಮಾಜೆ, ಪ್ರತೀಕ ಚವ್ಹಾಣ,ಖಂಡೋಬಾ ಕಂಗಟೆ, ಸಂಜು ವಡೆಯರ್, ಸಂದೀಪ ಪಟೇಲ್, ರಾವಸಾಬ್ ಪಾಟೀಲ, ಆನಂದ ದ್ಯಾಡೆ, ಮಹಾದೇವ ಅಲ್ಮಾಜೆ, ಜಗನ್ನಾಥ ಚಿಟ್ಮೆ, ಖಂಡೇರಾವ ರಂದವೆ, ರಾಮು ನರೋಟೆ, ಬಾಬು ರಾಠೋಡ, ಧನಾಜಿ ರಾಠೋಡ, ಪ್ರಕಾಶ ಅಲ್ಮಾಜೆ, ರಮೇಶ ಗೌಡಾ ಸೇರಿದಂತೆ ಮುಖಂಡರು, ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಬೀದರ್ ಜಿಲ್ಲೆಯ ಸಮಗ್ರ ಕೃಷಿ ಸಮೂಹಗಳ ಅಭಿವೃದ್ಧಿಗೆ ರೂ. 1.60 ಕೋಟಿ ಅನುದಾನ ಬಿಡುಗಡೆ-ಸಂಸದ ಸಾಗರ್ ಖಂಡ್ರೆ



ಬೀದರ, ಫೆ.17-

ಜಿಲ್ಲೆಯ ರೈತ ಬಾಂಧವರ ಆರ್ಥಿಕ ಸಬಲೀಕರಣ ಮತ್ತು ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ವೇಗ ನೀಡಲು ಜಾರಿಗೆ ತಂದಿರುವ ಸಮಗ್ರ ಕೃಷಿ ಸಮೂಹಗಳ ಯೋಜನೆಯಡಿಯಲ್ಲಿ ಜಿಲ್ಲೆಯ ಪ್ರಮುಖ ಒಕ್ಕೂಟಗಳಿಗೆ ಅನುದಾನದ ಚೆಕ್ ವಿತರಿಸುವ ಮೂಲಕ ಕೃಷಿ ವಲಯದ ಬಲವರ್ಧನೆಗೆ ಆದ್ಯತೆ ನೀಡಲಾಗುತ್ತಿದೆ ಎಂದು ಬೀದರ್ ಲೋಕಸಭಾ ಕ್ಷೇತ್ರದ ಸಂಸದರಾದ ಸಾಗರ್ ಖಂಡ್ರೆ ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಅನುಷ್ಠಾನಾ ಪ್ರಗತಿ ಪರಿಶೀಲನೆ ಜಿಲ್ಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ದಿಶಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಕುರಿತು ಮಾಹಿತಿ ನೀಡಿದ ಅವರು, ಜಿಲ್ಲೆಯಲ್ಲಿ ಒಟ್ಟು 24 ಕ್ಲಸ್ಟರ್‌ಗಳನ್ನು ಈ ಯೋಜನೆಯಡಿ ಆಯ್ಕೆ ಮಾಡಲಾಗಿದ್ದು, ಮೊದಲ ಹಂತದಲ್ಲಿ ಆಯ್ದ 8 ಕ್ಲಸ್ಟರ್‌ಗಳಿಗೆ ತಲಾ ರೂ. 20 ಲಕ್ಷದಂತೆ ಒಟ್ಟು ರೂ. 1.60 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಈಗಾಗಲೇ ಮೊದಲ ಹಂತದಲ್ಲಿ ಜಿಲ್ಲೆಯ ಹುಮ್ನಾಬಾದ್, ಬಸವಕಲ್ಯಾಣ, ಔರಾದ್, ಕಮಲನಗರ ಮತ್ತು ಭಾಲ್ಕಿ ತಾಲೂಕಿನ ಐದು ಕ್ಲಸ್ಟರ್‌ಗಳಿಗೆ ತಲಾ ರೂ. 20 ಲಕ್ಷ ಅನುದಾನ ತಲುಪಿದೆ ಎಂದರು.

ಉಳಿದ ಮೂರು ಪ್ರಮುಖ ತಾಲ್ಲೂಕುಗಳ ಒಕ್ಕೂಟಗಳಾದ ಬೀದರನ ತಾಲ್ಲೂಕಿನ ಜನವಾಡಾದ ಕೃಷ್ಣ ಸಂಜೀವಿನಿ ಜಿಪಿಎಲ್‌ಎಫ್, ಚಿಟಗುಪ್ಪಾ ತಾಲ್ಲೂಕಿನ ನಿರ್ಣಾದ ನಿರ್ಣ ಸಂಜೀವಿನಿ ಜಿಪಿಎಲ್‌ಎಫ್, ಹುಲಸೂರ ತಾಲ್ಲೂಕಿನ ಗೋರ್ಟಾದ ವೈಭವಿ ಸಂಜೀವಿನಿ ಜಿಪಿಎಲ್‌ಎಫ್ ಒಕ್ಕೂಟಗಳಿಗೆ ಸಂಸದರು ಚೆಕ್‌ಗಳನ್ನು ವಿತರಿಸಿದರು. ಸಂಘಟಿತ ಕೃಷಿ ಪದ್ಧತಿಯ ಮೂಲಕ ರೈತರು ಸ್ವಾವಲಂಬಿಗಳಾಗಬೇಕು ಹಾಗೂ ಸರ್ಕಾರಿ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಜಿಲ್ಲೆಯ ಪ್ರತಿಯೊಂದು ಕೃಷಿ ಸಮೂಹವು ಅಭಿವೃದ್ಧಿ ಪಥದಲ್ಲಿ ಸಾಗುವಂತೆ ಮಾಡಲು ನಾವು ಬದ್ಧರಾಗಿದ್ದೇವೆ, ಎಂದು ಸಂಸದರು ಇದೇ ಸಂದರ್ಭದಲ್ಲಿ ಆಶಯ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಬಿಪಿ ಮತ್ತು ಮಧುಮೇಹ ರೋಗಿಗಳ ಸಂಖ್ಯೆ ಹೆಚ್ಚುತ್ತಿರುವ ಕಾರಣ ಗ್ರಾಮ ಪಂಚಾಯತ ಮಟ್ಟದಲ್ಲಿ ಆರೋಗ್ಯ ಕ್ಯಾಂಪ್‌ಗಳ ಮೂಲಕ ಜಾಗೃತಿ ಮೂಡಿಸಿ ಆರೋಗ್ಯ ತಪಾಸಣೆ ಮಾಡಿ ಅಂತಹವರಿಗೆ ಉಚಿತವಾಗಿ ಔಷಧೋಪಚಾರ ಮಾಡುವಂತೆ ಕ್ರಮ ವಹಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸದರು.

ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸೌಲಭ್ಯಕ್ಕೆ ಜಲಜೀವನ ಮಿಷನ್ ಯೋಜನೆ ಜಾರಿಗೆ ತಂದಿದ್ದರೂ ಸಹ ಪ್ರತಿ ಮನೆಗಳಿಗೆ ಸಮರ್ಪಕವಾಗಿ ಶುದ್ಧ ಕುಡಿಯುವ ನೀರು ಸರಬರಾಜು ಆಗುತ್ತಿಲ್ಲ ಎಂದು ದೂರುಗಳು ಬರುತ್ತಿವೆ, ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕು ಮುಂದಿನ ದಿನಗಳಲ್ಲಿ ಬೇಸಿಗೆ ಕಾಲ ಬರುವುದರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು ಗಮನಹರಿಸಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಇಲಾಖೆ, ಅಂಚೆ ಇಲಾಖೆ, ಪಶುಪಾಲನಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿಗಲಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಬೀದರ ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶೀಷ್ ರೆಡ್ಡಿ, ಜಿಲ್ಲಾ ಹಾಗೂ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಸೇರಿದಂತೆ ಆಳಂದ, ಚಿಂಚೋಳಿ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಫೆ.26 ರಿಂದ ರಸ್ತೆ ಸಂಚಾರ ಗಣತಿ ಕಾರ್ಯ: ಸಾರ್ವಜನಿಕರು ಸಹಕರಿಸಲು ಮನವಿ

ಬೀದರ, ಫೆ.17-

ಕರ್ನಾಟಕ ರಾಜ್ಯದ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಗಳು ಹಆಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಓಡಾಡುವ ವಾಹನಗಳ ಗಣತಿಯನ್ನು ನಡೆಸಲಾಗುತ್ತಿದ್ದು, 2026ನೇ ಸಾಲಿನ ರಸ್ತೆ ಸಂಚಾರ ಗಣತಿಯನ್ನು ದಿನಾಂಕ: 26-02-2026 ರ ಬೆಳಿಗ್ಗೆ 6 ಗಂಟೆಯಿಂದ ದಿನಾಂಕ: 27-02-2026 ರ ಬೆಳಿಗ್ಗೆ 6 ಗಂಟೆಯವರೆಗೆ ಸತತವಾಗಿ 02 ದಿನಗಳ ಕಾಲ ನಡೆಯಲಿದೆ. ಗಣತಿಗೆ ವೃತ್ತ ಕಲಬುರಗಿ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ಮೇಲೆ 194 ಗಣತಿ ಕೇಂದ್ರಗಳನ್ನು ಮತ್ತುಜಿಲ್ಲಾ ಮುಖ್ಯ ರಸ್ತೆಗಳ ಮೇಲೆ 266 ಗಣತಿ ಕೇಂದ್ರಗಳನ್ನು ಒಟ್ಟು 460 ಗಣತಿ ಕೇಂದ್ರಗಳನ್ನು ಆಯ್ಕೆ ಮಾಡಲಾಗಿದೆಯೆಂದು ಕಲಬುರಗಿ ಲೋಕೋಪಯೋಗಿ ಇಲಾಖೆ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಗಣತಿಯ ಮುಖ್ಯ ಉದ್ದೇಶ ಪ್ರತಿ ರಸ್ತೆಯ ಸಂಚಾರದ ಬೆಳವಣಿಗೆಯ ತೀವ್ರತೆಯನ್ನು ಅಳೆಯುವುದು. ಪ್ರಸ್ತೂತದಲ್ಲಿ ಇರುವ ರಸ್ತೆಗಳನ್ನು ದುರಸ್ತಿ ಪಡಿಸುವಲ್ಲಿ ಹಾಗೂ ರಸ್ತೆಯನ್ನು ಇನ್ನು ಉತ್ತಮ ಪಡಿಸಲು ಸಹಾಯಕವಾಗುವುದು. ರಸ್ತೆಯ ಸಂಚಾರದ ಬೆಳವಣಿಗೆಯ ತೀವ್ರತೆಯನ್ನು ಗಮನಿಸಿ ರಸ್ತೆಯ ಅಗಲೀಕರಣಗೊಳಿಸುವುದು. ರಸ್ತೆಗಳನ್ನು ಮೇಲ್ದರ್ಜೆಗೇರಿಸುವಲ್ಲಿ ಈ ಗಣತಿಯ ವರದಿ ಪ್ರಮುಖ್ಯವಾಗಿರುತ್ತದೆ. ರಸ್ತೆಯ ಸಂಚಾರದ ಗಣತಿಯಿಂದ ವಾಹನ ಅಪಘಾತಗಳನ್ನು ತಡೆಯಲು ಕ್ರಮ ತೆಗೆದುಕೊಳ್ಳಲು ಅನುಕೂಲವಾಗುತ್ತದೆ. ವಾಹನ ಚಾಲಕರು ಮತ್ತು ಸಾರ್ವಜನಿಕರು ತಮ್ಮ ವಾಹನಗಳನ್ನು ನಿಧಾನವಾಗಿ ಚಲಿಸಿ ಸಂಚಾರ ಗಣತಿಯನ್ನು ಯಶಸ್ವಿಯಾಗಿಸಲು ಸಹಕರಿಸಬೇಕೆಂದು ಅವರು ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆ; ಜಿಲ್ಲಾ ಮಟ್ಟದ ತರಬೇತಿ ಮಹಿಳೆಯರ, ಮಕ್ಕಳ ಸಾಗಣೆ ತಡೆಗೆ ಮುಂದಾಗಿ: ನ್ಯಾ.ಹೆಚ್.ಎ.ಸಾತ್ವಿಕ್

ತಪ್ಪಿಸಬೇಕಾದ್ದು, ಪ್ರತಿಯೊಬ್ಬರ ಕರ್ತವ್ಯವಾಗಿದೆ. ಮಹಿಳೆಯರ ಅಭಿವೃದ್ಧಿಗಾಗಿ ಸರ್ಕಾರ ಜಾರಿ ತಂದಿರುವ ಯೋಜನೆಗಳ ಸದುಪಯೋಗವಾಗುವಂತೆ ಮಾಡಿ, ಸಮಾಜದ ಬದಲಾವಣೆಗೆ ಶ್ರಮಿಸಬೇಕು ಎಂದರು.

ಪ್ರತಿಜ್ಞಾವಿಧಿ ಬೋಧನೆ: ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಕುರಿತು ತರಬೇತಿ ಕಾರ್ಯಕ್ರಮದಲ್ಲಿ ಕರ್ನಾಟಕವನ್ನು ಮಾನವ ಕಳ್ಳ ಸಾಗಾಣಿಕೆಯಿಂದ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಜನರನ್ನು ರಕ್ಷಿಸಲು ಹಾಗೂ ಸಾಗಾಣಿಕೆಗೆ ಒಳಪಟ್ಟವರಿಗೆ ಸೂಕ್ತ ನ್ಯಾಯ ಒದಗಿಸಲು ನನ್ನ ಸೇವೆಯನ್ನು ಮುಡುಪಾಗಿಡುತ್ತೇನೆ, ಸಂವಿಧಾನದಲ್ಲಿ ನೀಡಿರುವ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಜೆ.ಕುಮಾರಸ್ವಾಮಿ ಅವರು ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂ, ಕಾರ್ಮಿಕ ಇಲಾಖೆ ಅಧಿಕಾರಿ ಆರತಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ ಕಾರನೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಕುಮಾರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಮೈಬೂಬ್ ಸಾಬ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಶಿಶು ಅಭಿವೃದ್ಧಿ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು ಇದ್ದರು.

ಮಹಿಳಾ ಮತ್ತು ಮಕ್ಕಳ ಇಲಾಖೆಯ ತಜ್ಞರಾದ ಗಿರಿಜವ್ವ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

ಕೇಂದ್ರ ತಂಡದ ಅಧಿಕಾರಿಗಳಿಂದ ನರೇಗಾ ಕಾಮಗಾರಿ ಪರಿಶೀಲನೆ

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸಹಾಯಕ ನಿರ್ದೇಶಕರು ಹನುಮಂತ, ಪಂಚಾಯತ ಅಭಿವೃದ್ಧಿ ಅಧಿಕಾರಿ, ಡಿಪಿಎಮ್, ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಐಇಸಿ ಸಂಯೋಜಕರು ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಇದ್ದರು.

ಬೊಮ್ಮನಾಳದಲ್ಲಿ ಚರ್ಚ್ ಹೆಬ್ಬಾಗಿಲು ಅನಾವರಣ, ಸನ್ಮಾನ ಕ್ರೈಸ್ತ ಮಿಷನರಿಗಳ ಶೈಕ್ಷಣಿಕ, ಆರೋಗ್ಯ ಸೇವೆ ಅನನ್ಯ-ಬಿ.ವೆಂಕಟಸಿಂಗ್

ಬೊಮ್ಮನಾಳ ಗ್ರಾಮದಲ್ಲಿ ಕಳೆದ ಐದು ದಶಕಗಳ ಹಿಂದೆ ಚರ್ಚ್ ನಿರ್ಮಿಸಲಾಗಿತ್ತು ಈಗ ಹಳೆಯದಾದ ಚರ್ಚ್ ಪುನರ್ ನಿರ್ಮಾಣಗೊಳ್ಳುತ್ತಿರುವುದು ಸಂತಸದ ವಿಚಾರ. ನಮ್ಮ ಕುಟುಂಬಕ್ಕೆ ಹಾಗೂ ನಮ್ಮ ಗ್ರಾಮದ ಕ್ರೈಸ್ತ ಸಮಯುದಾಯಕ್ಕೆ ಮೂರು ತಲೆಮಾರಿನ ಸಂಬಂಧ ಇದೆ. ನಮ್ಮ ಸ್ವಂತ ಮನೆಯನ್ನು ಪಾರ್ಥನೆ ಮಾಡಲು ಚರ್ಚ್‌ಗೆ ಬಿಟ್ಟುಕೊಡಲಾಗಿತ್ತು ಅದೇ ಹಳೆ ಮನೆಯಲ್ಲಿ ಈಗ ಕ್ರೈಸ್ತ ಸಮಯದಾಯದ ಸಮುದಾಯ ಭವನ ನಿರ್ಮಾಣವಾಗುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಏನೇ ಸಮಸ್ಯೆ ಇದ್ದರು, ಮಕ್ಕಳಿಗೆ ಶಿಕ್ಷಣದಿಂದ ಮಚತರನ್ನಾಗಿ ಮಾಡಬಾರದು ಎಂದು ಸಲಹೆ ಮಾಡಿದ ಅವರು ಗ್ರಾಮದಲ್ಲಿ ಎಲ್ಲಾ ಸಮುದಾಯದೊಂದಿಗೆ ಸಾಮರಸ್ಯ ಜೀವನ ನಡೆಸುವಂತೆ ಸಲಹೆ ನೀಡಿ ಇದೇ ಓಣಿಯಲ್ಲಿ ಹುಟ್ಟಿ ಬೆಳೆದು ಬಂದ ತಮ್ಮ ಬಾಲ್ಯದ ಜೀವನದ ನೆನಪು ಮೆಲಕು ಹಾಕಿದರು.

ಸಿರವಾರ ಜಿಲ್ಲಾ ಮೆಥೋಡಿಸ್ಟ್ ಚರ್ಚ್‌ಗಳ ಜಿಲ್ಲಾ ಮೇಲ್ವಿಚಾರಕರಾದ ಸುಂದರರಾಲ ಸಾಮ್ಯುಯಲ್ ಮಾತನಾಡಿ ಪರಮ ಪವಿತ್ರವಾದ ಯೇಸು ಪ್ರಭುವಿನ ಮಕ್ಕಳಾದ ನೀವು ಇಂದು ಇಂತಹ ಹಳ್ಳಿಯಲ್ಲಿ ಭವ್ಯ ಚರ್ಚ್ ನಿರ್ಮಾಣ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಎಲ್ಲ ಸಮುದಾಯದವರೊಂದಿಗೆ ಸಮನ್ವಯತೆಯಿಂದ ಬದುಕು ಸಾಗಿಸಿ ಮಕ್ಕಳಿಗೆ ಶಿಕ್ಷಣ ನೀಡಲು ಹೇಳಿದರು.

ಈ ಹಿಂದೆ ಚರ್ಚ ನಿರ್ಮಾಣ ಮಾಡಿದ ಅದರ ಪುನರ್ ನಿರ್ಮಾಣ ಮಾಡುತ್ತಿರುವುದು ಗ್ರಾಮದಲ್ಲಿ ಕ್ರೈಸ್ತ ಸಮುದಾಯದವರು ಯೇಸು ಪ್ರಭೂವಿನಲ್ಲಿಟ್ಟಿರುವ ಕಾರಣ ಎಂದು ಹೇಳಿದರು.

ಇದಕ್ಕೂ ಮುನ್ನ ತಮ್ಮ ಗ್ರಾಮದ ಹಿರಿಯ ಪತ್ರಕರ್ತರಾದ ಬಿ.ವೆಂಕಟಸಿಂಗ್ ಅವರು ಮಾಹಿತಿ ಆಯೋಗದ ಆಯುಕ್ತರಾದ ಹಿನ್ನೆಲೆಯಲ್ಲಿ ಮೆರವಣಿಗೆ ಮೂಲಕ ಸ್ವಾಗತಿಸಲಾಯಿತು.ಇದೇ ವೇಳೆ ಮಾಹಿತಿ ಆಯೋಗದ ಆಯುಕ್ತರಾದ ಬಿ.ವೆಂಕಟಸಿಂಗ್ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ರುಬೇನ್, ಜಾನಪ್ಪಫಿ, ಸಾಮ್ಯುವೆಲ್, ದೇವಪುತ್ರ ಗೆಜ್ಜಲಪ್ಪಫಿ, ಸುರೇಶ, ಜಯಪ್ಪಫಿ, ಆನಂದಪ್ಪಫಿ, ಶಾಂತರಾಜು, ರಾಜು, ಯೇಸಪ್ಪ ಮತ್ತಿತರರಿದ್ದರು.

ರಾಜ್ಯ ಕೇಂದ್ರ ಸರ್ಕಾರಗಳ ವಿರುದ್ಧ ಅಂಗವಿಕಲರ ಪ್ರತಿಭಟನೆ: ಫೆ.19ರಿಂದ ಬೈಕ್ ರ್‍ಯಾಲಿ ಆರಂಭ

ಬಜೆಟ್‌ನಲ್ಲಿ ವಿಶೇಷ ಅನುದಾನ ಮೀಸಲಿಡುವುದು, ಬಾಲ್ಯದಲ್ಲೇ ಅಂಗವಿಕಲತೆ ತಡೆಯಲು ಪ್ರತಿ ಜಿಲ್ಲೆಯಲ್ಲಿ ನ್ಯೂನ್ಯತೆ ತಡೆ ಕೇಂದ್ರ ಸ್ಥಾಪಿಸುವುದು ಹಾಗೂ ತಾಲೂಕುಗ್ರಾಮ ಪಂಚಾಯತ್‌ಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಂಗವಿಕಲರಿಗೆ ಸಾಮಾಜಿಕ ಭದ್ರತೆ ಒದಗಿಸುವುದು ಸೇರಿವೆ.

ಸುದ್ದಿಗೋಷ್ಠಿಯಲ್ಲಿ ಭೀಮ್ ಸೇನ್, ಮಹಮ್ಮದ್ ಅಲಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಗೃಹ ಆರೋಗ್ಯ ಯೋಜನೆಯಡಿ ಮನೆ ಬಾಗಿಲಿಗೆ ಆರೋಗ್ಯ ಸೇವೆಗಳು

ಅಗತ್ಯವಿದ್ದರೆ ಔಷಧಿ ವಿತರಣೆ ಮಾಡಲಾಗುವುದು, ಅಗತ್ಯವಿರುವ ರೋಗಿಗಳನ್ನು ಆಸ್ಪತ್ರೆಗೆ ದಾಖಲಿಸಲಾಗುವುದು. ಹಿರಿಯ ನಾಗರಿಕರು, ಅಂಗವಿಕಲ ವ್ಯಕ್ತಿಗಳು ಮತ್ತು ಹೊರರೋಗಿಗಳ ಆರೈಕೆಯ ಅಗತ್ಯವಿರುವ ರೋಗಿಗಳಿಗೆ ವಿಶೇಷ ಸೌಲಭ್ಯಗಳನ್ನು ನೀಡಲಾಗಿದೆ. ಅಧಿಕ ರಕ್ತದೊತ್ತಡ ಮತ್ತು ಮಧುಮೇಹ ಹೊಂದಿರುವ ರೋಗಿಗಳನ್ನು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಕಳುಹಸಿ ಚಿಕಿತ್ಸೆ ಒದಗಿಸಲಾಗುತ್ತದೆ.

ಒಟ್ಟಾರೆಯಾಗಿ ಕರ್ನಾಟಕ ಸರಕಾರವು ನಿಮ್ಮ ಅರೋಗ್ಯ-ನಮ್ಮ ಆದ್ಯತೆ ಎಂಬ ಧ್ಯೆಯದಂತೆ ಸಮುಯದಾಯದ ಕಟ್ಟಕಡೆಯ ವ್ಯಕ್ತಿಗೂ ಗುಣಮಟ್ಟದ ಅರೋಗ್ಯ ಸೇವೆಗಳನ್ನು ನೀಡುವ ಜೊತೆಗೆ ಕುಟುಂಬವು ನೆಮ್ಮದಿಯ ಜೀವನ ಸಾಗಿಸಲು ದೃಡ ಹೆಜ್ಜೆಗಳನ್ನು ಇಟ್ಟಿದೆ.

- ಡಾ.ಸುರೇಂದ್ರ ಬಾಬು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ರಾಯಚೂರು.
- ಡಾ.ಚಂದ್ರಶೇಖರಯ್ಯ ಸ್ವಾಮಿ ಆರೋಗ್ಯ ಇಲಾಖೆಯ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು, ರಾಯಚೂರು.

ಡಾ.ಅಂಬೇಡ್ಕರ ಕುರಿತು ಎರಡು ದಿನಗಳ ಅಂತರಾಷ್ಟ್ರೀಯ ವಿಚಾರ ಸಂಕಿರಣ-ಸಚಿವ ಈಶ್ವರ ಬಿ.ಖಂಡ್ರೆ



ಬೀದರ, ಫೆ.17-

ಡಾ.ಬಿ.ಆರ್.ಅಂಬೇಡ್ಕರ ಅವರ ಭಾರತದ ಪ್ರಸ್ತುತ ಸವಾಲುಗಳು, ಚಿಂತನೆಗಳು ಮತ್ತು ಸಮಕಾಲಿನ ಪರಿಹಾರಗಳು ಎಂಬ ವಿಷಯದ ಕುರಿತು ಅಂತರಾಷ್ಟ್ರೀಯ/ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣವನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬೀದರ ನಗರದಲ್ಲಿ ಹಮ್ಮಿಕೊಳ್ಳಲಾಗುವುದೆಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಈ ಕುರಿತು ಜಿಲ್ಲಾಡಳಿತ ಹಾಗೂ ಸಮಾಜದ ವಿವಿಧ ಹಿರಿಯ ಮುಖಂಡರುಗಳ ಸಭೆಯಲ್ಲಿ ಅವರು ಮಾತನಾಡಿದರು.

ಬೀದರ ಜಿಲ್ಲೆ ರಾಜ್ಯದ ಕಿರೀಟಪ್ರಾಯ, ಬಸವ ಭೂಮಿಯಲ್ಲಿ ಡಾ.ಅಂಬೇಡ್ಕರ ಕುರಿತು ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣ, ನಾಟಕ ವಿಚಾರ ಗೋಷ್ಠಿಗಳು ನಡೆಯುತ್ತಿರುವುದು ಹೆಮ್ಮೆಯ ವಿಷಯ. ಈ ಭೂಮಿಯಿಂದ ರಾಜ್ಯ, ರಾಷ್ಟ್ರಕ್ಕೆ ಉತ್ತಮ ಸಂದೇಶ ಸಾಗಲಿದೆಯೆಂದರು.

ಬುದ್ಧ, ಬಸವ, ಅಂಬೇಡ್ಕರ ಅವರ ಆದರ್ಶ ಚಿಂತನೆಗಳು, ಹೋರಾಟ, ಸಮಸಮಾಜ ನಿರ್ಮಾಣ, ಜಾತಿ ವರ್ಗ ಮೀರಿ ಎಲ್ಲರಿಗೂ ಅನ್ವಯವಾಗಲಿವೆ. ಡಾ.ಅಂಬೇಡ್ಕರ ಅವರ ವಿಚಾರಧಾರಗಳು ಎಲ್ಲ ಸಮುದಾಯಗಳಿಗೆ ಬೇಕಿವೆ. ಜಿಲ್ಲೆಯ ಎಲ್ಲ ವರ್ಗದ ಜನರನ್ನು, ಮುಖಂಡರನ್ನು, ಯುವ ಸಮುದಾಯಗಳನ್ನು ಒಳಗೊಳ್ಳುವಂತೆ ಯಶಸ್ವಿಯಾಗಿ ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗುಗುವುದು ಎಂದು ತಿಳಿಸಿದರು.

ಮಾರ್ಚ ಮೊದಲ ಅಥವಾ ಎರಡನೇ ವಾರದಲ್ಲಿ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗುವುದು. ಸ್ಥಳವನ್ನು ನಿಗದಿಪಡಿಸುವುದು, ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಸಚಿವರನ್ನು ಆಹ್ವಾನಿಸುವ ಬಗ್ಗೆ ಚರ್ಚಿಸುತ್ತೇನೆ. ವಿಚಾರ ಸಂಕಿರಣದಲ್ಲಿ ಅಂಬೇಡ್ಕರ ಅವರ ಕುರಿತಾದ ಅತ್ಯುತ್ತಮ ಕಲಾವಿದರಿಂದ ನಾಟಕಗಳನ್ನು, ಸಾಹಿತಿ ಹಾಗೂ ಹೋರಾಟಗಾರರಿಂದ ವಿವಿಧ ವಿಷಯಗಳ ವಿಚಾರಗೋಷ್ಠಿ ಹಮ್ಮಿಕೊಳ್ಳಲಾಗುವುದು ಹಾಗೂ ಡಾ.ಬಾಬಾಸಾಹೇಬ ಅಂಬೇಡ್ಕರ ಅವರ ಕುರಿತು ಹೋರಾಟ ಮತ್ತು ಚಿಂತನೆವುಳ್ಳ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಗಣ್ಯವ್ಯಕ್ತಿಗಳನ್ನು ಕರೆಯಲಾಗುವುದು ಎಂದು ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದರು.

ವಿಚಾರ ಸಂಕಿರಣದಲ್ಲಿ ಆರು ಪ್ರಮುಖ ವಿಷಯಗಳ ಬಗ್ಗೆ ಗೋಷ್ಠಿಗಳು ನಡೆಯಲಿವೆ. ಡಾ.ಅಂಬೇಡ್ಕರ ಅವರ ಚಿಂತನೆಗಳು, ಸಮನ್ವಯತೆ ಮತ್ತು ಭವಿಷ್ಯದ ದಿಕ್ಕು, ಲಿಂಗ ಸಮಾನತೆ, ಅಸ್ಪೃಶ್ಯತೆಯ ಸಬಲೀಕರಣದ ವಿವಿಧ ಆಯಾಮಗಳು, ಭಾರತದ ಸಂವಿಧಾನದ ಪರಂಪರೆ, ಆಶಯ ಮತ್ತು ಮೌಲ್ಯಗಳು, ಭಾರತದ ಆರ್ಥಿಕ, ಸಾಮಾಜಿಕ ನ್ಯಾಯ ಮತ್ತು ಧಾರ್ಮಿಕ ಹಕ್ಕುಗಳು, ಬುದ್ಧ, ಬಸವ, ಅಂಬೇಡ್ಕರ ಮತ್ತು ಇತರೆ ದಾರ್ಶನಿಕ ತತ್ವಸಿದ್ಧಾಂತಗಳ ಪ್ರಸ್ತುತ ಅಳವಡಿಕೆ, ಭಾರತದ ಜಾತಿ ವ್ಯವಸ್ಥೆ ಮತ್ತು ಸಾಮಾಜಿಕ ಸವಾಲುಗಳು, ಮುಂತಾದ ವಿಷಯಗಳ ಮೇಲೆ ಗೋಷ್ಠಿಗಳುನಡೆಯಲಿವೆ.

ಸಭೆಯಲ್ಲಿಸಮಾಜದ ಹಿರಿಯ ಮುಖಂಡರುಗಳು ವಿಚಾರ ಸಂಕಿರಣದ ಯಶಸ್ವಿಗಾಗಿ ವಿವಿಧ ಸಲಹೆಗಳನ್ನು ನೀಡಿದರು. ಎಲ್ಲರ ಸಲಹೆಗಳನ್ನು ಪರಿಶೀಲಿಸಿ ಜಿಲ್ಲಾಡಳಿತ ಹಾಗೂ ಸಮಾಜದ ಎಲ್ಲ ಮುಖಂಡರುಗಳು ಸಹಕಾರದಿಂದ ಕಾರ್ಯಕ್ರಮ ಯಶಸ್ವಿಗೊಳಿಸಲಾಗುವುದು ಎಂದು ಸಚಿವ ಖಂಡ್ರೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ, ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ್, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಬಿ.ಕರಾಳೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಯೋಗೇಶ, ಸೇರಿದಂತೆ ಸಮಾಜದ ಮುಖಂಡರುಗಳು ಉಪಸ್ತಿತರಿದ್ದರು.

ಕುದಿಸಿ ಆರಿಸಿ ಸೋಸಿದ ನೀರು ಕುಡಿಯಿರಿ-ಡಾ.ಯಲ್ಲಾ ರಮೇಶ್



ಬಳ್ಳಾರಿ,ಫೆ.17-

ಸಾರ್ವಜನಿಕರು ಕುದಿಸಿ ಆರಿಸಿ ಸೋಸಿದ ನೀರನ್ನು ಕುಡಿಯಬೇಕು. ಇದರಿಂದ ಸಂಭಾವ್ಯ ವಾಂತಿ ಬೇಧಿ ಪ್ರಕರಣಗಳನ್ನು ತಡೆಗಟ್ಟಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಯಲ್ಲಾ ರಮೇಶ್‌ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಬೇಸಿಗೆ ಪ್ರಾರಂಭದ ಹಿನ್ನಲೆಯಲ್ಲಿ ಜಾತ್ರೆ ಹಾಗೂ ಉತ್ಸವಗಳಲ್ಲಿ ಕಲುಷಿತ ನೀರಿನಿಂದ, ಕಲುಷಿತ ಆಹಾರ ಸೇವನೆಯಿಂದ ಸಾಮಾನ್ಯವಾಗಿ ವಾಂತಿ ಬೇಧಿ ಸೇರಿದಂತೆ ಟೈಫಾಯಿಡ್, ಕಾಲರ, ಮುಂತಾದ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಗಳಿರುತ್ತವೆ.

ಅದರಲ್ಲೂ ವಾಂತಿ ಬೇಧಿ ಪ್ರಕರಣಗಳು ಕಂಡುಬಂದ ಸಂದರ್ಭದಲ್ಲಿ ಕುದಿಸಿ ಆರಿಸಿ ಸೋಸಿದ ನೀರನ್ನು ಕುಡಿಯಬೇಕು. ಓಆರ್‌ಎಸ್ ಜೀವಜ ಲವನ್ನು ತಯಾರಿಸುವಾಗ 1 ಲೀ.

ನೀರಿಗೆ ಆರೋಗ್ಯ ಇಲಾಖೆಯಿಂದ ಕೊಡುವ ಪೊಟ್ಟಣದಲ್ಲಿರುವ ಪುಡಿಯನ್ನು ಸಂಪೂರ್ಣವಾಗಿ ಹಾಕಿ ಮಿಶ್ರಣ ಮಾಡಿದ ದ್ರಾವಣವನ್ನು ವಾಂತಿ ಬೇಧಿ ಭಾದಿತರಿಗೆ ಕುಡಿಯಲು ಕೊಡಬೇಕು ಹಾಗೂ ಇದನ್ನು 24 ಗಂಟೆಯೊಳಗೆ'ಂಪೂಣ ರ್ವಾಗಿ ಬಳಸಲು ಆದ್ಯತೆ ನೀಡಬೇಕು ಎಂದಿದ್ದಾರೆ.

ಕಲುಷಿತ ನೀರಿನ ಸೇವನೆಯಿಂದ ಸಾಮಾನ್ಯವಾಗಿ ವಾಂತಿ-ಬೇಧಿ, ಕಾಲರಾ, ಟೈಪಾಯಿಡ್, ಹೆಪಟೈಟಸ್-ಎ, ಗಿಯಾರ್ಡಿಯಾ, ಸಾಲ್ಮೋ ನೆಲ್ಲಾ ಶಿಗೆಲ್ಲೋಸಿಸ್, ಅಮೀಬಿಯಾಸಿಸ್, ಇ-ಕೋಲಿ (ಇವುಗಳಲ್ಲಿ ವಾಂತಿ-ಬೇಧಿ, ಕಾಲರಾ, ಹೆಪಟೈಟಸ್-ಎ ಮತ್ತು ಕಲುಷಿತ ಆಹಾರ ಸೇವನೆಯಿಂದ ಸಹ ರೋಗ ಬರಬಹುದು) ಸಾಂಕ್ರಾಮಿಕ ರೋಗಗಳು ಹರಡುತ್ತವೆ. ಸಾರ್ವಜನಿಕರು ಶುದ್ದ ನೀರಿನ ಘಟಕದ ನೀರನ್ನು ಕುಡಿಯಬೇಕು ಎಂದಿದ್ದಾರೆ.

ಮಲ-ಮೂತ್ರ ವಿಸರ್ಜನೆಗಾಗಿ ಶೌಚಾಲಯಗಳನ್ನೇ ಬಳಸಬೇಕು. ತಂಗಳು ಆಹಾರ ಸೇವಿಸದೇ ಬೆಳಗಿನ ಆಹಾರ ಬೆಳಿಗ್ಗೆ ಹಾಗೂ ರಾತ್ರಿ ಆಹಾರ ರಾತ್ರಿ ಮಾತ್ರ ಬಳಸಬೇಕು. ಮುಖ್ಯವಾಗಿ ಬೇಸಿಗೆಯಲ್ಲಿ ಹೆಚ್ಚು ಜಾಗೃತಿ ವಹಿಸಬೇಕು.

ತಯಾರಿಸಿದ ಆಹಾರದ ಮೇಲೆ ನೊಣ ಕೂಡದಂತೆ ಮುಚ್ಚಳ, ಕುಡಿಯುವ ನೀರು ತುಂಬಿದ ನಂತರ ಪಾತ್ರೆಗಳಿಗೆ ಮುಚ್ಚಳ ಮುಚ್ಚಬೇಕು. ಆದಷ್ಟು ನಳ ಇರುವ ಪಾತ್ರೆಗಳನ್ನು ಬಳಸಿ, ನೀರಿನಲ್ಲಿ ಕೈ ಅದ್ದದಂತೆ ಮುಂಜಾಗೃತೆ ವಹಿಸಬೇಕು ಎಂದು ಹೇಳಿದ್ದಾರೆ.

ಮೇಲ್ಕಂಡ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಮೂಲಕ ಸುರಕ್ಷಿತರಾಗಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೃಹತ್ ತೆರಿಗೆ ಸಂಗ್ರಹ ಅಭಿಯಾನಕ್ಕೆ ಸಿಇಓ ಕುರೇರ್ ಚಾಲನೆ



ಬಾಗಲಕೋಟೆ , ಫೆ.17-

ಗ್ರಾಮ ಪಂಚಾಯತಿಗಳ ಆರ್ಥಿಕ ಸ್ವಾವಲಂಬನೆ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡುವ ಉದ್ದೇಶದಿಂದ ಹಮ್ಮಿಕೊಳ್ಳಲಾದ ಬೃಹತ್ ತೆರಿಗೆ ಸಂಗ್ರಹ ಅಭಿಯಾನಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವಿವಿಧ ಗ್ರಾಮ ಪಂಚಾಯತಿಗಳಿಗೆ ಸೋಮವಾರ ಭೇಟಿ ನೀಡಿ ಚಾಲನೆ ನೀಡಿದರು.

ಬಾಗಲಕೋಟೆ ತಾಲೂಕಿನ ಕಲಾದಗಿ, ಖಜ್ಜಿಡೋಣಿ, ದೇವನಾಳ, ತುಳಸಿಗೇರಿ ಹಾಗೂ ಗದ್ದನಕೇರಿ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿದ ಸಿಇಓ ಅವರು, ತೆರಿಗೆ ಸಂಗ್ರಹ ಪ್ರಗತಿ, ಬಾಕಿ ತೆರಿಗೆ ಪಟ್ಟಿ, ದಿನನಿತ್ಯದ ವಸೂಲಾತಿ ದಾಖಲೆಗಳು ಹಾಗೂ ಇ-ಗ್ರಾಮ ಸ್ವರಾಜ್ ಪೋರ್ಟಲ್‌ನಲ್ಲಿ ದಾಖಲಾದ ಮಾಹಿತಿಯನ್ನು ಪರಿಶೀಲಿಸಿದರು. ತೆರಿಗೆ ವಸೂಲಾತಿ ಗುರಿ ನಿಗದಿ ಮಾಡಿ ದಿನವಾರ ಮತ್ತು ವಾರವಾರ ಪ್ರಗತಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮಸ್ಥರೊಂದಿಗೆ ಸಂವಾದ ನಡೆಸಿದ ಅವರು, ''ಗ್ರಾಮದ ರಸ್ತೆ, ಕುಡಿಯುವ ನೀರು, ಸ್ವಚ್ಛತೆ, ಬೀದಿ ದೀಪ, ಒಳಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳ ನಿರ್ವಹಣೆಗಾಗಿ ತೆರಿಗೆ ಆದಾಯವೇ ಪ್ರಮುಖ ಆಧಾರವಾಗಿದೆ. ಆದ್ದರಿಂದ ಪ್ರತಿಯೊಬ್ಬ ನಾಗರಿಕರೂ ಸಮಯಕ್ಕೆ ಸರಿಯಾಗಿ ತೆರಿಗೆ ಪಾವತಿಸಬೇಕು'' ಎಂದು ಕರೆ ನೀಡಿದರು.

ಅಭಿಯಾನದ ಅಂಗವಾಗಿ ಮನೆಮನೆಗೆ ಭೇಟಿ ನೀಡಿ ಬಾಕಿ ಇರುವ ಆಸ್ತಿ ತೆರಿಗೆ, ನೀರಿನ ಶುಲ್ಕ ಹಾಗೂ ಇತರೆ ಕರಗಳನ್ನು ಪಾವತಿಸುವಂತೆ ಮನವಿ ಮಾಡಲಾಯಿತು. ದೀರ್ಘಕಾಲ ಬಾಕಿ ಉಳಿಸಿಕೊಂಡಿರುವವರ ವಿರುದ್ಧ ನಿಯಮಾನುಸಾರ ನೋಟಿಸ್ ಜಾರಿಗೊಳಿಸಿ ಅಗತ್ಯ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಗ್ರಾಮ ಪಂಚಾಯತ್ ಸಿಬ್ಬಂದಿಗೆ ದಾಖಲೆ ನಿರ್ವಹಣೆಯಲ್ಲಿ ಪಾರದರ್ಶಕತೆ ಕಾಪಾಡುವುದು, ಆದಾಯಖರ್ಚಿನ ಲೆಕ್ಕಪತ್ರಗಳನ್ನು ನವೀಕರಿಸುವುದು ಹಾಗೂ ಆನ್‌ಲೈನ್ ವ್ಯವಸ್ಥೆಯನ್ನು ಸಮರ್ಪಕವಾಗಿ

ಬಳಸುವಂತೆ ಮಾರ್ಗದರ್ಶನ ನೀಡಿದರು. ಮುಂದಿನ 15 ದಿನಗಳೊಳಗೆ ತೆರಿಗೆ ವಸೂಲಾತಿಯಲ್ಲಿ ಗಮನಾರ್ಹ ಪ್ರಗತಿ ಸಾಧಿಸಬೇಕು ಎಂದು ಸೂಚಿಸಿದ ಸಿಇಓ ಅವರು, ಅಗತ್ಯವಿದ್ದಲ್ಲಿ ಮರುಪರಿಶೀಲನಾ ಸಭೆ ನಡೆಸಲಾಗುವುದು ಎಂದು ತಿಳಿಸಿದರು. ಅಭಿಯಾನವನ್ನು ಜನಸಹಭಾಗಿತ್ವದ ಚಳುವಳಿಯಾಗಿ ರೂಪಿಸಿ, ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಸಹಕರಿಸುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಬಾಗಲಕೋಟೆ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಸೇರಿದಂತೆ ಆಯಾ ಗ್ರಾಮ ಪಂಚಾಯತಿಗಳ ಕರ ವಸೂಲಾತಿಗಾರರು ಉಪಸ್ಥಿತರಿದ್ದರು.

ರೈತ ಮುಖಂಡ ಎಂ.ಪ್ರಕಾಶ ಮೇಲೆ ಮಾರಣಾಂತಿಕ ಹಲ್ಲೆ: ಆರೋಪಿಗಳನ್ನು ಬಂಧಿಸುವಲ್ಲಿ ಮೀನಾಮೇಶ: ವಿರೇಶನಾಯಕ ಆಕ್ರೋಶ



ಮಾನ್ವಿ,ಫೆ.17-

ತಾಲೂಕಿನ ಅಮರೇಶ್ವರ ಕ್ಯಾಂಪಿನಲ್ಲಿ ರೈತ ಮುಖಂಡ ಎಂ.ಪ್ರಕಾಶ ಮೇಲೆ ಮಾರಣಾಂತಿಕ ಹಲ್ಲೆ ಮತ್ತು ಕೊಲೆಗೆ ಯತ್ನಿಸಿರುವ ಆರೋಪಿಗಳನ್ನುಕೊಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಯುವ ಮುಖಂಡ ವಿರೇಶನಾಯಕ ಅಮರೇಶ್ವರ ಕ್ಯಾಂಪ್ ಒತ್ತಾಯಿಸಿದ್ದಾರೆ. ಪಟ್ಟಣದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಾ ಅಮರೇಶ್ವರ ಕ್ಯಾಂಪನಲ್ಲಿನ ಹಾಲು ಉತ್ಪಾದಕರ ಸಹಕಾರ ಸಂಘ'ವು ಕಳೆದ 2025ನೇ ಸಾಲಿನಲ್ಲಿ ನಡೆದಿರುವ ಭ್ರಷ್ಟಾಚಾರ ಮತ್ತು ನಕಲಿ ಸದಸ್ಯರ ನೋಂದಣಿ ಹಾಗೂ ಸಂಘದಲ್ಲಿ 30 ವರ್ಷದಿಂದ ಎಸ್.ಸಿ. ಎಸ್.ಟಿ. ಸದಸ್ಯರಿಲ್ಲದೇ ಇರುವ ಬಗ್ಗೆ ಅಮರೇಶ್ವರ ಕ್ಯಾಂಪಿನ ಎಂ.ಪ್ರಕಾಶ ಅವರು ಮೇಲಾಧಿಕಾರಿಗಳಿಗೆ ದೂರು ನೀಡಿದ್ದರಿಂದ ಕಳೆದ ವರ್ಷದ 2025ನೇ ಸಾಲಿನಲ್ಲಿ ಹಾಲು ಉತ್ಪಾದಕರ ಸಂಘದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಸದಸ್ಯರನ್ನು ತೆಗೆದುಕೊಳ್ಳುವಂತೆ ದೂರು ನೀಡಿ ನ್ಯಾಯ ದೊರಕಿಸಿಕೊಟ್ಟದ್ದರು. ಈ ವಿಚಾರವಾಗಿ ಹಳೆಯ ದ್ವೇಷವನ್ನು ಇಟ್ಟುಕೊಂಡು ಫೆ.13 ರಂದು ಸಂಜೆ 6. 30 ಕ್ಕೆ ಅಮರೇಶ್ವರ ಕ್ಯಾಂಪ್ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಹಾಲು ಹಾಕಲು ಬಂದಿರುವ ಎಂ.ಪ್ರಕಾಶ ಇವರಿಗೆ 6 ಜನರು ಸೇರಿ ಅವರ ಮೇಲೆ ಹಲ್ಲೆ ಮಾಡಿ ಕೊಲೆ ಮಾಡಲು ಪ್ರಯತ್ನಿಸಿರುತ್ತಾರೆ. ಈ ವಿಚಾರವಾಗಿ ಮಾನ್ವಿ ಪೊಲೀಸ್ ಠಾಣೆಯಲ್ಲಿ ಈಗಾಗಲೇ ಕ್ರಿಮಿನಲ್ ಪ್ರಕರಣ ದಾಖಲಾಗಿದ್ದು

ಆದರೆ ಪ್ರಕರಣ ದಾಖಲಾಗಿ ಮೂರು ದಿನಗಳು ಕಳೆದರು ಪೊಲೀಸರು ಎಲ್ಲಾ ಆರೋಪಿತರನ್ನು ಬಂಧಿಸುವಲ್ಲಿ ಸಂಪೂರ್ಣವಾಗಿ ವಿಫಲಗೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು

ರೈತ ಮುಖಂಡ ಎಂ.ಪ್ರಕಾಶ ಮೇಲೆ ನಡೆದಿರುವ ಹಲ್ಲೆ ಹಾಗೂ ಕೊಲೆ ಯತ್ನಕ್ಕೆ ಸಂಬಂಧಿಸಿದಂತೆ ತಾಲೂಕಾ ಡಳಿತ ಹಾಗೂ ಪೊಲೀಸ್ ಇಲಾಖೆಯವರು ಹಲ್ಲೆಗೊಳಗಾದ ಎಂ.ಪ್ರಕಾಶ ಇವರಿಗೆ ನ್ಯಾಯ ಒದಗಿಸಬೇಕು ಹಾಗೂ ಆರೋಪಿತರನ್ನು ಈ ಕೂಡಲೇ ಬಂಧಿಸಿ ಅವರಿಗೆ ಗಡಿಪಾರು ಮಾಡಬೇಕು. ಇಲ್ಲದಿದ್ದರೆ ರೈತರೂಂದಿಗೆ ಉಗ್ರ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ವಿರೇಶನಾಯಕ ಎಚ್ಚರಿಸಿದ್ದಾರೆ.

ಈ ವೇಳೆ ಶಿವಾರ್ಜುನ ನಾಯಕ ಜಿಲ್ಲಾಧ್ಯಕ್ಷರು ರೈತ ಸಂಘ, ಮೌನೇಶನಾಯಕ ಮ್ಯಾಕಲ್ ಉಮಳಿಹೊಸರು, ನಾಗೇಂದ್ರ ಪ್ರಸಾದ್, ವಿಜಯಕುಮಾರ ಕೊಟ್ನೆಕಲ್ ಸೇರಿದಂತೆ ಇನ್ನಿತರರಿದ್ದರು.

ಸಮಾನತೆ, ಧಾರ್ಮಿಕ ಮೌಲ್ಯಗಳನ್ನು ಜಗತ್ತಿಗೆ ಸಾರಿದ ಮಹನೀಯ ಮಡಿವಾಳ ಮಾಚಿದೇವರು: ಜೆ.ಸಿ.ರಾಜಶೇಖರ



ಕೊಪ್ಪಳ , ಫೆ.17-

ಸಮಾಜದಲ್ಲಿ ಸಮಾನತೆ ಮತ್ತು ಧಾರ್ಮಿಕ ಮೌಲ್ಯಗಳ ಮಹತ್ವವನ್ನು ಸಾರುವಲ್ಲಿ ಮಡಿವಾಳ ಮಾಚಿದೇವ ಅವರ ಪಾತ್ರ ಬಹಳ ದೊಡ್ಡದು. ಮಡಿವಾಳ ಮಾಚಿದೇವರು 12ನೇ ಶತಮಾನದ ಮಹಾನ್ ಶರಣರಲ್ಲಿ ಒಬ್ಬರು. ಬಸವಣ್ಣ ಅವರ ಅನುಭವ ಮಂಟಪದ ಶರಣರಲ್ಲಿ ಒಬ್ಬರಾಗಿದ್ದು, ಜಾತಿ ಭೇದ ನಿರ್ಮೂಲನೆಗಾಗಿ ಶ್ರಮಿಸಿದವರು ಎಂದು ರಾಮಕೃಷ್ಣ ವಿವೇಕಾನಂದ ಆಶ್ರಮದ ಸದಸ್ಯರು ಹಾಗೂ ಜೀವನ ಕೌಶಲ್ಯ ತರಬೇತುದಾರರು, ಪ್ರೇರಣೆ ಮಾತುಗಾರರಾದ ಜೆ.ಸಿ.ರಾಜಶೇಖರ ಬಳ್ಳಾರಿ ಅವರು ಹೇಳಿದರು.

ಅವರು ಸೋಮವಾರದಂದು ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಮಾಚಿದೇವರು ಭಕ್ತಿಗಿಂತ ಕಾಯಕ ಶ್ರೇಷ್ಠ ಎಂದು ಬಾಳಿದವರು. ಅವರು ಕಲ್ಯಾಣದಲ್ಲಿ ಶಿವನ ಭಕ್ತರ ಬಟ್ಟೆಗಳನ್ನು ಮಾತ್ರ ತೊಳೆಯುತ್ತಿದ್ದರು. ಜಾತಿ ಭೇದವಿಲ್ಲದೆ ಎಲ್ಲರೂ ದೇವರ ಮುಂದೆ ಸಮಾನರು ಎಂಬ ತತ್ವವನ್ನು ಬೋಧಿಸಿದರು. ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಸಂದೇಶ ಸಾರಿದರು. ತಮ್ಮ ವಚನಗಳ ಮೂಲಕ ಧಾರ್ಮಿಕ ಮತ್ತು ನೈತಿಕ ಮೌಲ್ಯಗಳನ್ನು ಜನರಿಗೆ ತಿಳಿಸಿದರು. ಮಡಿವಾಳ ಮಾಚಿದೇವರು ಬಸವಣ್ಣನವರ ಬೆನ್ನೆಲುಬಾಗಿ ಇದ್ದರು. ಪ್ರಸ್ತುತ ದಿನಮಾನಗಳಲ್ಲಿ ಶಿಕ್ಷಣಕ್ಕೆ ಅತಿ ಹೆಚ್ಚಿನ ಮಹತ್ವವಿದೆ. ಹಾಗಾಗಿ ಎಲ್ಲರೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಅವರ ಭವಿಷ್ಯವನ್ನು ಉಜ್ವಲವಾಗಿ ರೂಪಿಸಬೇಕು ಎಂದು ಹೇಳಿದರು.

ಚಿತ್ರದುರ್ಗ ಸಂಸ್ಥಾನಮಠದ ಡಾ. ಬಸವಮಾಚಿದೇವ ಮಹಾಸ್ವಾಮಿ ಮಾತನಾಡಿ, 12ನೇ ಶತಮಾನದ ಮಹಾನ್ ಶರಣರಲ್ಲಿ ನಮ್ಮ ಮಡಿವಾಳ ಮಾಚಿದೇವ ಒಬ್ಬರು. 3 ಕೋಟಿಗೂ ಹೆಚ್ಚು ವಚನಗಳನ್ನು ರಚಿಸಿದವರು. ಎಲ್ಲರಿಗೂ ಸ್ಫೂರ್ತಿಯಾಗುವ ಮಹಾನ್ ವ್ಯಕ್ತಿ. ಮಡಿವಾಳ ಮಾಚಿದೇವರು ತಮ್ಮ ಜೀವನದ ಮೂಲಕ ಸಮಾನತೆ, ಪರಿಶ್ರಮ ಮತ್ತು ಭಕ್ತಿಯ ಮಹತ್ವವನ್ನು ಸಾರಿದರು. ಜಾತಿ-ಮತ ಭೇದವಿಲ್ಲದೆ ಎಲ್ಲರೂ ದೇವರ ಮುಂದೆ ಸಮಾನರು ಎಂಬ ಸಂದೇಶವನ್ನು ನೀಡಿದರು. ಅವರು ಬಸವಣ್ಣ ಅವರ ಅನುಭವ ಮಂಟಪದ ಶರಣರಲ್ಲಿ ಪ್ರಮುಖರಾಗಿದ್ದರು. ಅವರ ವಚನಗಳು ನಮ್ಮ ಜೀವನಕ್ಕೆ ಮಾರ್ಗದರ್ಶಕವಾಗಿವೆ. ಶ್ರಮವೇ ಶ್ರೇಷ್ಠ ಎಂಬ ತತ್ವವನ್ನು ಅವರು ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಸಮಾಜದಲ್ಲಿ ಹಿಂದುಳಿದವರ ಪರವಾಗಿ ನಿಂತು ಸಮಾನ ಹಕ್ಕುಗಳಿಗಾಗಿ ಹೋರಾಡಿದರು ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ಜಿಲ್ಲಾಧಿಕಾರಿಗಳ ಆಪ್ತ ಸಹಾಯಕಿ ವಿಜಯಲಕ್ಷ್ಮೀ, ತಹಶೀಲ್ದಾರ ಕಚೇರಿಯ ಶಿರಸ್ತೇದಾರ ಮಹಾವೀರ, ನಗರಸಭೆಯ ಮಾಜಿ ಅಧ್ಯಕ್ಷ ಅಜ್ಮದ್ ಪಟೇಲ್, ಮಡಿವಾಳರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣ ಎಸ್. ಮಡಿವಾಳರ, ತಾಲೂಕು ಮಡಿವಾಳ ಸಂಘದ ಅಧ್ಯಕ್ಷ ಶರಣಪ್ಪ ಕುಣಿಕೇರಿ, ತಾಲೂಕು ಮಡಿವಾಳ ಯುವಕ ಸಂಘದ ಉಪಾಧ್ಯಕ್ಷ ಈರಣ್ಣ ಮಡಿವಾಳ, ತಾಲೂಕು ಪ್ರಧಾನ ಕಾರ್ಯದರ್ಶಿ ಅಮರೇಶ ತಿಪ್ಪಣ್ಣ ಮಡಿವಾಳರ, ಸಮಾಜದ ಮುಖಂಡರಾದ ಎಮ್.ಕೆ.ಹನುಮಂತಪ್ಪ, ರಾಮಣ್ಣ, ಬಸವರಾಜ, ದುರಗೇಶ ಜಿ., ಹುಲಗಪ್ಪ ಜಿ., ಮಂಜುಳಾ, ಸಂಗಮೇಶ, ಬಾಬಣ್ಣ, ಫಕೀರಪ್ಪ, ಶಿವಪ್ಪ, ದ್ಯಾಮಣ್ಣ ಸೇರಿದಂತೆ ಸಮಾಜದ ಇತರೆ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಆರ್‌ಎಸ್‌ಎಸ್ ಬಲ, ಮಾಧ್ಯಮಗಳ ಬೆಂಬಲದಿಂದ ಬಿಜೆಪಿ ಬದುಕಿದೆಯೇ?



ಮಾಧ್ಯಮಗಳ ಬೆಂಬಲದಿಂದ ಕಮಲದ ಕೆಸರು ಕಾಣದಂತಾಗಿದೆ. ಆರ್‌ಎಸ್‌ಎಸ್‌ನ ಬಲದಿಂದ ಬಿಜೆಪಿ ಬೆಳೆಯುತ್ತಿದೆ. ಇವೆರಡರ ಬೆಂಬಲವಿಲ್ಲದ ಬಿಜೆಪಿಯನ್ನು ಊಹಿಸಿಕೊಳ್ಳುವುದೂ ಕಷ್ಟವಿದೆ.

ಇತ್ತೀಚಿನ ಕಾರ್ಯಕ್ರಮವೊಂದರಲ್ಲಿ ಐಟಿ-ಬಿಟಿ ಸಚಿವ ಪ್ರಿಯಾಂಕ ಖರ್ಗೆಯವರು, ಆರ್‌ಎಸ್‌ಎಸ್ ಇಲ್ಲದಿದ್ದರೆ ಬಿಜೆಪಿಯು ಜೆಡಿಎಸ್‌ಗಿಂತಲೂ ಕಡೆಯಾಗುತ್ತಿತ್ತು, ಬೆಲೆ ಕಳೆದುಕೊಳ್ಳುತ್ತಿತ್ತು ಎಂದು ಹೇಳಿದರು.

ಸಚಿವ ಪ್ರಿಯಾಂಕ ಖರ್ಗೆಯವರ ಮಾತಿನಲ್ಲಿ ಸತ್ಯವಿದೆ. ಆದರೆ ಅದನ್ನು ಜೆಡಿಎಸ್‌ನೊಂದಿಗೆ ಹೋಲಿಕೆ ಮಾಡಿದ್ದು ಸರಿ ಇಲ್ಲ ಎನಿಸುತ್ತದೆ. ಏಕೆಂದರೆ, 90ರ ದಶಕದಲ್ಲಿ ರಾಜ್ಯದಲ್ಲಿ ಉಚ್ಛ್ರಾಯ ಸ್ಥಿತಿಯಲ್ಲಿದ್ದ ಜನತಾದಳ, ಇಂದು ಜೆಡಿಎಸ್ ಆಗಿ ತನ್ನ ಅಸ್ತಿತ್ವ ಕಳೆದುಕೊಂಡಿರಬಹುದು, ಕಣ್ಮರೆಯಾಗಿಲ್ಲ. ಇದೇ ಮಾತುಗಳನ್ನು ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್ ಪಕ್ಷದ ಸ್ಥಿತಿ ಕುರಿತು ಹೇಳಬಹುದು. 2024ರ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಗಳಿಸಿದ 99 ಸ್ಥಾನಗಳತ್ತಲೂ ನೋಡಬಹುದು.

ಭಾರತದ ರಾಜಕೀಯ ಇತಿಹಾಸದಲ್ಲಿ ಪಕ್ಷಗಳು ಕಳೆಗುಂದುವುದು, ಸ್ಥಾನಗಳು ಏರುಪೇರಾಗುವುದು ಹೊಸದೇನೂ ಅಲ್ಲ. ಭಾರತೀಯ ಜನತಾ ಪಕ್ಷ ಕೂಡ 1991ರ ಸಾರ್ವತ್ರಿಕ ಚುನಾವಣೆಯಲ್ಲಿ 120 ಸ್ಥಾನಗಳನ್ನಷ್ಟೇ ಗೆದ್ದಿತ್ತು. ಇಂದು ಬಹುದೊಡ್ಡ ರಾಜಕೀಯ ಪಕ್ಷವಾಗಿದೆ. ಅತಿ ಹೆಚ್ಚು ದೇಣಿಗೆ- 7,113 ಕೋಟಿ ಸಂಗ್ರಹಿಸಿ ಸಂಪದ್ಭರಿತ ಪಕ್ಷವೆನಿಸಿಕೊಂಡಿದೆ. ಸತತ ಮೂರನೇ ಬಾರಿಗೆ ಗೆದ್ದು ಪ್ರಬಲ ಪಕ್ಷವಾಗಿ ಹೊರಹೊಮ್ಮಿದೆ.

ಬಿಜೆಪಿ ಈ ಸ್ಥಿತಿಗೆ ಬರಲು, ಆರ್‌ಎಸ್‌ಎಸ್ ಬೆಂಬಲವೇ ಮುಖ್ಯ ಕಾರಣವಾಗಿದೆ. ಅಸಲಿಗೆ, ಆರ್‌ಎಸ್‌ಎಸ್ ತಾನು ರಾಜಕೀಯದಿಂದ ಆಚೆಗಿರುವ ಸಂಘಟನೆ ಎಂದು ಹೇಳಿಕೊಳ್ಳುತ್ತದೆಯಾದರೂ, ಆರ್‌ಎಸ್‌ಎಸ್‌ನ ರಾಜಕೀಯ ಅಂಗವೇ ಬಿಜೆಪಿ ಎನ್ನುವುದು ಎಲ್ಲರಿಗೂ ಗೊತ್ತಿರುವ ಬಹಿರಂಗ ಸತ್ಯ. ಅಲ್ಲದೆ, ಬಿಜೆಪಿಗೆ ಸೈದ್ಧಾಂತಿಕ ತಳಹದಿಯನ್ನು ಹಾಕಿಕೊಟ್ಟಿದ್ದು ಹಾಗೂ ಸಂಘಟನಾ ಶಕ್ತಿಯನ್ನು ಒದಗಿಸುವುದು ಆರ್‌ಎಸ್‌ಎಸ್. ಹೀಗಿರುವಾಗ ಪಕ್ಷವೇ ಬೇರೆ ಸಂಘವೇ ಬೇರೆ ಎಂದರೆ, ಪ್ರಿಯಾಂಕ ಖರ್ಗೆ ಹೇಳಿದಂತೆ, ಬಿಜೆಪಿ ಬೆಲೆ ಕಳೆದುಕೊಳ್ಳುತ್ತದೆ.

ಇದಕ್ಕೆ ಇತ್ತೀಚಿನ ಉದಾಹರಣೆಯಾಗಿ ಮಹಾರಾಷ್ಟ್ರ ರಾಜಕಾರಣವನ್ನು ಗಮನಿಸಬಹುದಾಗಿದೆ. ಏಪ್ರಿಲ್ 2024ರಲ್ಲಿ, ಲೋಕಸಭಾ ಚುನಾವಣೆಗೂ ಮುನ್ನ ಬಿಜೆಪಿ ನಾಯಕರು ಮತ್ತು ಸಂಘದ ಮುಖ್ಯಸ್ಥರ ನಡುವೆ ಮುನಿಸು ತಲೆದೋರಿತ್ತು. ಅದನ್ನು ಪುಷ್ಟೀಕರಿಸುವಂತೆ ಅಂದಿನ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ದಿ ಇಂಡಿಯನ್ ಎಕ್ಸ್‌ಪ್ರೆಸ್ ಪತ್ರಿಕೆಗೆ ನೀಡಿದ ಸಂದರ್ಶನದಲ್ಲಿ, ಬಿಜೆಪಿಗೆ ಇನ್ನು ಆರ್‌ಎಸ್‌ಎಸ್ ಕೈ ಹಿಡಿದು ನಡೆಸುವ ಅಗತ್ಯವಿಲ್ಲ ಎಂದು ಹೇಳಿದ್ದು- ಆರ್‌ಎಸ್‌ಎಸ್ ನಾಯಕರಿಗೆ ಇರುಸು ಮುರುಸುಂಟುಮಾಡಿತ್ತು. ಆ ಮುನಿಸು ಲೋಕಸಭಾ ಚುನಾವಣೆಯ ಫಲಿತಾಂಶದಲ್ಲಿ, ಅದರಲ್ಲೂ ಮಹಾರಾಷ್ಟ್ರದಲ್ಲಿ ಬಿಜೆಪಿ ಕೇವಲ 9 ಸ್ಥಾನಗಳನ್ನು ಗೆಲ್ಲುವುದರ ಮೂಲಕ ಎದ್ದು ಕಂಡಿತ್ತು. ಮೋದಿಯ ಚಾರ್ ಸೌ ಪಾರ್ ಘೋಷಣೆ ಗೇಲಿಗೊಳಗಾಗಿತ್ತು; 240 ಸ್ಥಾನಗಳಿಗೆ ಸೀಮಿತಗೊಂಡು ಬಿಜೆಪಿ ಬುಡಕ್ಕೆ ಬಿಸಿನೀರು ಬಿಟ್ಟಿತ್ತು.

ಹಾಗೆಯೇ ಮಹಾರಾಷ್ಟ್ರ ರಾಜ್ಯ ಬಿಜೆಪಿ ಹಿಡಿತದಿಂದ ಕಳಚಿಕೊಳ್ಳುವುದು ಖಚಿತವಾಗಿತ್ತು. ಬಿಜೆಪಿಯ ದೆಹಲಿ ನಾಯಕರು ಕೂಡ ವಿಶ್ವಾಸ ಕಳೆದುಕೊಂಡಿದ್ದರು. ಆದರೆ, ನಾಗಪುರದ ಆರ್‌ಎಸ್‌ಎಸ್ ಕೇಂದ್ರ ಕಚೇರಿ ಕಣ್ಣುಮುಚ್ಚಿ ಕೂರಲಿಲ್ಲ. ಲೋಕಸಭಾ ಚುನಾವಣೆ ನಡೆದು ಕೇವಲ 7 ತಿಂಗಳ ಅಂತರದಲ್ಲಿ, ನವೆಂಬರ್ 2024ರಲ್ಲಿ, ಎದುರಾದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ 132 ಸ್ಥಾನಗಳನ್ನು ಗೆಲ್ಲುವಂತೆ ನೋಡಿಕೊಂಡಿತ್ತು. ಬಿಜೆಪಿ ಮತ್ತೆ ಅಧಿಕಾರಕ್ಕೇರಿತ್ತು. ಇದು ಹೇಗೆ ಸಾಧ್ಯ ಎಂದು ಇಡೀ ದೇಶವೇ ಮಹಾರಾಷ್ಟ್ರದತ್ತ ನೋಡಿತ್ತು. ಬಿಜೆಪಿ ಗೆಲುವಿನ ಹಿಂದೆ ಆರ್‌ಎಸ್‌ಎಸ್ ಮುಖ್ಯಸ್ಥರಾದ ಮೋಹನ್ ಭಾಗವತ್ ಅವರ ಆದೇಶವಿತ್ತು.

ದೇಶದಲ್ಲಿ ಬಿಜೆಪಿ ಬೆಳೆಯಲು, ಭದ್ರವಾಗಿ ಬೇರೂರಲು ದೇಶದಾದ್ಯಂತ ಅನಧಿಕೃತವಾಗಿ 2,500 ಅಂಗಸಂಸ್ಥೆಗಳನ್ನು ಹೊಂದಿರುವ ಮನುವಾದಿ ಆರ್‌ಎಸ್‌ಎಸ್ ಪಾತ್ರ ಎಷ್ಟು ಮುಖ್ಯವೋ; ಮನುವಾದಿ ಮನಸ್ಥಿತಿಯ ಸುದ್ದಿ ಮಾಧ್ಯಮಗಳ ಪಾತ್ರವೂ ಅಷ್ಟೇ ಮುಖ್ಯ. ದೇವರು, ಧರ್ಮ, ಹಿಂದುತ್ವ, ರಾಷ್ಟ್ರೀಯತೆಯ ಸನ್ನಿಗೆ ಅಥವಾ ಅಮೇಧ್ಯದ ಆಸೆಗೆ ಬಲಿಯಾದ ಮಾಧ್ಯಮಗಳು ಕಳೆದ ಹನ್ನೊಂದು ವರ್ಷಗಳಲ್ಲಿ ನಿರ್ವಹಿಸಿದ ರೀತಿಯನ್ನು ಅವಲೋಕಿಸಿದರೆ- ಬಿಜೆಪಿ ಬದುಕಿರುವ ಸುಳಿವು ಸಿಗುತ್ತದೆ. 2014ರಿಂದ 2025ರವರೆಗೆ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ, ಸುಮಾರು 6 ಸಾವಿರ ಕೋಟಿ ರೂ.ಗಳನ್ನು ಮುದ್ರಣ, ಟೆಲಿವಿಷನ್ ಮತ್ತು ಡಿಜಿಟಲ್ ಮಾಧ್ಯಮಗಳ ಜಾಹೀರಾತುಗಳಿಗೆ ಧಾರಾಳವಾಗಿ ದಾನ ಮಾಡಿರುವುದು, ಅದನ್ನು ಸಾಬೀತುಪಡಿಸುತ್ತದೆ. ಇದಲ್ಲದೆ, ಪಕ್ಷದ ವತಿಯಿಂದ, ಕೇವಲ ಒಂದೇ ಒಂದು 2024ರ ಚುನಾವಣೆಗಾಗಿ 1,737 ಕೋಟಿ ರೂ.ಗಳು ಜಾಹೀರಾತಿನ ಮೂಲಕ ಮಾಧ್ಯಮಗಳಿಗೆ ಹರಿದುಬಂದಿದೆ. ಬಿಜೆಪಿ ಮತ್ತು ಮಾಧ್ಯಮಗಳ ಅನೈತಿಕ ಮಿಲನದ ಫಲವಾಗಿ, ಬೂಟು ನೆಕ್ಕುವ ಪತ್ರಕರ್ತರು ಮತ್ತು ಗೋದಿ ಮೀಡಿಯಾ ಎಂಬ ಹೊಸ ವ್ಯಾಖ್ಯಾನವೇ ಚಾಲ್ತಿಗೆ ಬಂದಿದೆ.

ಇಂದು ದೇಶದಲ್ಲಿ ಬಿಜೆಪಿ ಬೆಂಬಲದಿಂದ ಅನೇಕ ಮಾಧ್ಯಮ ಸಂಸ್ಥೆಗಳ ಮಾಲೀಕರು, ಮಾಧ್ಯಮವಲ್ಲದ ಹಲವು ಕ್ಷೇತ್ರಗಳಲ್ಲಿ ವ್ಯಾಪಾರ-ವ್ಯವಹಾರವನ್ನು ಹೊಂದಿದ್ದಾರೆ. ಸರ್ಕಾರದ ನೀತಿ-ನಿರ್ಣಯಗಳ ಮೇಲೆ ಅವರು ಅವಲಂಬಿತರಾಗಿದ್ದಾರೆ. ಈ ಅವಲಂಬನೆ ಅವರ ಮಾಲೀಕತ್ವದ ಸುದ್ದಿ ಸಂಸ್ಥೆಗಳ ಸಂಪಾದಕೀಯ ನಿಲುವುಗಳ ಮೇಲೆ ಪರಿಣಾಮ ಬೀರಿ ಪತ್ರಿಕೋದ್ಯಮದ ಪಾವಿತ್ರ್ಯತೆ ಮತ್ತು ಸ್ವತಂತ್ರತೆಯನ್ನು ಸಮಾಧಿ ಮಾಡುತ್ತಿದೆ. ಕಾರ್ಪೊರೇಟ್ ಮತ್ತು ರಾಜಕೀಯ ಕ್ಷೇತ್ರಗಳ ಕೂಡಾವಳಿಯ ಫಲವಾಗಿ; ಸರ್ಕಾರದ ದುರಾಡಳಿತ, ಭ್ರಷ್ಟಾಚಾರ, ಸುಳ್ಳುಗಳು ಮರೆಮಾಚಲ್ಪಟ್ಟು ಜನರಿಗೆ ಸತ್ಯ ತಿಳಿಯದಾಗಿದೆ.

ಕಾರ್ಪೊರೇಟ್ ಮತ್ತು ರಾಜಕೀಯ ನಾಯಕರ ಮರ್ಜಿಯಲ್ಲಿ ಮಾಧ್ಯಮ ಇರುವುದರಿಂದ ಸಾರ್ವಜನಿಕ ಸಂವಾದ ಸತ್ತಿದೆ. ಭಿನ್ನಮತದ ಧ್ವನಿ ದಮನಗೊಂಡಿದೆ. ಸ್ಥಾಪಿತ ಹಿತಾಸಕ್ತಿಗಳಿಗೆ ಅನುಕೂಲವಾಗುವಂತೆ ಕಥನಗಳನ್ನು ಕಟ್ಟುತ್ತಿರುವುದರಿಂದ, ಪ್ರಶ್ನೆ ಮತ್ತು ವಿಮರ್ಶೆ ಅಂಚಿನತ್ತ ತಳ್ಳಲ್ಪಟ್ಟಿದೆ. ಇದು ಪತ್ರಿಕೋದ್ಯಮದ ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆ ತಂದಿದೆ. ಪ್ರಜಾಸತ್ತಾತ್ಮಕ ಹೊಣೆಗಾರಿಕೆ ಕಣ್ಮರೆಯಾಗಿದೆ.

ರಾಜಕಾರಣಿಗಳ ಮತ್ತು ಕಾರ್ಪೊರೇಟ್ ಸಂಸ್ಥೆಗಳ ಮಾಲೀಕರ ಸಂಯೋಜನೆಯ ಉತ್ತಮ ಉದಾಹರಣೆಯಾಗಿ ಅಂಬಾನಿ ಮಾಲೀಕತ್ವದ ರಿಲಯನ್ಸ್ ಇಂಡಸ್ಟ್ರೀಸ್ ಹಿಡಿತದಲ್ಲಿ ಇಂದು 50ಕ್ಕೂ ಹೆಚ್ಚು ಮಾಧ್ಯಮ ಸಂಸ್ಥೆಗಳಿವೆ. ಮತ್ತೊಬ್ಬ ಕಾರ್ಪೊರೇಟ್ ಕುಳ ಗೌತಮ್ ಅದಾನಿ ಕೈಯಲ್ಲಿ ಪ್ರತಿಷ್ಠಿತ ಎನ್‌ಡಿಟಿವಿ ಇದೆ. ಇವರಿಬ್ಬರೂ ಪ್ರಧಾನಿ ಮೋದಿಯವರ ಆಪ್ತರಾಗಿದ್ದಾರೆ. ಮಾಧ್ಯಮಗಳ ಬೆಂಬಲದಿಂದ ಕಮಲದ ಕೆಸರು ಕಾಣದಂತಾಗಿದೆ. ಆರ್‌ಎಸ್‌ಎಸ್‌ನ ಬಲದಿಂದ ಬಿಜೆಪಿ ಬೆಳೆಯುತ್ತಿದೆ. ಇವೆರಡರ ಬೆಂಬಲವಿಲ್ಲದ ಬಿಜೆಪಿಯನ್ನು ಊಹಿಸಿಕೊಳ್ಳುವುದೂ ಕಷ್ಟವಿದೆ. ಹಾಗಾಗಿ, ಬಿಜೆಪಿಯಿಂದ ದೇಶವನ್ನು ಪಾರು ಮಾಡಬೇಕಾದರೆ, ಮೊದಲು ಮನುವಾದಿ ಆರ್‌ಎಸ್‌ಎಸ್ ಮತ್ತು ಅಮೇಧ್ಯ ಮೆಲ್ಲುತ್ತಿರುವ ಮಾಧ್ಯಮಗಳನ್ನು ದೂರ ಇಡಬೇಕಾಗಿದೆ.

ರಾಯಚೂರು ಅಂಚೆ ಇಲಾಖೆಯಿಂದ ಉಳಿತಾಯ ಸಂಕಲ್ಪ ಅಭಿಯಾನ

ರಾಯಚೂರು ಫೆಬ್ರವರಿ 16

ಅಂಚೆ ಇಲಾಖೆಯಿಂದ ಸಾರ್ವಜನಿಕರಿಗೆ ಉತ್ತಮ ಆದಾಯ ನೀಡುವ ವಿವಿಧ ಉಳಿತಾಯ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಬಳಸಿಕೊಳ್ಳುವಂತೆ ಜಾಗೃತಿ ಮೂಡಿಸಲು ಹಾಗೂ ಅಂಚೆ ಕಚೇರಿಗಳ ಉಳಿತಾಯ ಮತ್ತು ಹೂಡಿಕೆ ಯೋಜನೆಗಳಿಗೆ ಉತ್ತೇಜನ ನೀಡಲು ಉಳಿತಾಯ ಸಂಕಲ್ಪ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಭಾರತ ಸರ್ಕಾರದ ಭರವಸೆಯೊಂದಿಗೆ ಅಂಚೆ ಕಚೇರಿ ಉಳಿತಾಯ ಬ್ಯಾಂಕ್ (ಪಿಒಎಸ್‌ಬಿ) ಸಾರ್ವಜನಿಕರಿಗೆ ಸುರಕ್ಷಿತ ಮತ್ತು ವಿಶ್ವಾಸಾರ್ಹ ಉಳಿತಾಯ ಹಾಗೂ ಹೂಡಿಕೆ ಯೋಜನೆಗಳನ್ನು ಒದಗಿಸುತ್ತಿದೆ. ಅಂಚೆ ಕಚೇರಿಗಳ ವಿವಿಧ ಉಳಿತಾಯ ಮತ್ತು ಹೂಡಿಕೆ ಯೋಜನೆಗಳಲ್ಲಿ ಹೂಡಿಕೆ ಮಾಡುವ ಮೂಲಕ ಗ್ರಾಹಕರು ತಮ್ಮ ಹೂಡಿಕೆಯ ಮೇಲೆ ನಿಯಮಿತ ಬಡ್ಡಿ ಹಾಗೂ ನಿರಂತರ ಆದಾಯವನ್ನು ಪಡೆಯಬಹುದು.

ಈ ಯೋಜನೆಗಳು ದೇಶದ ಎಲ್ಲಾ ಅಂಚೆ ಕಚೇರಿಗಳಲ್ಲಿ, ವಿಶೇಷವಾಗಿ ಗ್ರಾಮೀಣ ಹಾಗೂ ದೂರದ ಪ್ರದೇಶಗಳಲ್ಲಿಯೂ ಲಭ್ಯವಿವೆ. ಇದಲ್ಲದೆ, ಗ್ರಾಹಕರು ಎಟಿಎಂ, ನೆಟ್ ಬ್ಯಾಂಕಿಗ್, ಮೊಬೈಲ್ ಬ್ಯಾಂಕಿಗ್, ನೆಫ್ಟ್ ಹಾಗೂ ಆರ್‌ಟಿಜಿಎಸ್ ಸೇರಿದಂತೆ ಆಧುನಿಕ ಬ್ಯಾಂಕಿಗ್ ಸೌಲಭ್ಯಗಳನ್ನು ಸಹ ಉಪಯೋಗಿಸಬಹುದು.

ಉಳಿತಾಯ ಖಾತೆ ಹೊಂದಿರುವ ಗ್ರಾಹಕರು ಕಡಿಮೆ ಪ್ರೀಮಿಯಂನಲ್ಲಿ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ (ಪಿಎಂಎಸ್‌ಬಿವೈ) ಹಾಗೂ ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ(ಪಿಎಂಜೆಜೆಬಿವೈ) ಗಳಲ್ಲಿ ನೋಂದಾಯಿಸಿಕೊಡು ಅನಿರೀಕ್ಷಿತ ಸಂದರ್ಭಗಳಲ್ಲಿ ತಮ್ಮ ಕುಟುಂಬಕ್ಕೆ ಅಗತ್ಯವಾದ ಆರ್ಥಿಕ ಭದ್ರತೆಯನ್ನು ಒದಗಿಸಬಹುದು.ಗ್ರಾಮೀಣ ಪ್ರದೇಶಗಳಲ್ಲಿ ವಿಶೇಷವಾಗಿ ಆರ್ಥಿಕ ಒಳಗೊಳ್ಳುವಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ಇಂಡಿಯಾ ಪೋಸ್ಟ್ ಇದೀಗ ಉಳಿತಾಯ ಸಂಕಲ್ಪ ಅಭಿಯಾನವನ್ನು ಜಾರಿಗೊಳಿಸಿದೆ. ಎಲ್ಲಾ ನಾಗರಿಕರು ತಮ್ಮ ಹತ್ತಿರದ ಅಂಚೆ ಕಚೇರಿಗೆ ಭೇಟಿ ನೀಡಿ ಹೊಸ ಉಳಿತಾಯ ಖಾತೆ ತೆರೆಯುವಂತೆ ಹಾಗೂ ಅಂಚೆ ಕಚೇರಿಗಳ ವಿವಿಧ ಯೋಜನೆಗಳಲ್ಲಿ ಹೂಡಿಕೆ ಮಾಡಿ ನಿಯಮಿತ ಮತ್ತು ನಿರಂತರ ಆದಾಯ ಪಡೆಯುವಂತೆ ವಿನಂತಿಸಲಾಗಿದೆ. ಈ ಅಭಿಯಾನವನ್ನು ಯಶಸ್ವಿಗೊಳಿಸಲು ಸಾರ್ವಜನಿಕರು ಸಹಕರಿಸಬೇಕು ಎಂದು ರಾಯಚೂರು ವಿಭಾಗೀಯ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಂಗ್ಲಾದೇಶ ದೇಶದ ಉದಯವನ್ನೇ ವಿರೋಧಿಸಿದ್ದ ಪಕ್ಷಕ್ಕೆ ಪ್ರತಿಪಕ್ಷ ಸ್ಥಾನ

ಬಾಂಗ್ಲಾದೇಶದ ಜಾತ್ಯತೀತ ಮೌಲ್ಯಗಳಿಗೆ ಜಮಾಅತ್ ಇಂದಿಗೂ ಸವಾಲಾಗಿದೆ. ಇಸ್ಲಾಮಿಕ್ ರಾಷ್ಟ್ರದ ಪರಿಕಲ್ಪನೆಯೇ ಅವರ ಮೂಲ ಸಿದ್ಧಾಂತ. ಅವಾಮಿ ಲೀಗ್ ಇಲ್ಲದ ಸಂಸತ್ತಿನಲ್ಲಿ ಅಥವಾ ಮುಂಬರುವ ಚುನಾವಣೆಯಲ್ಲಿ ಜಮಾಅತ್ ನಿರ್ಣಾಯಕ ಪಾತ್ರ ವಹಿಸುವುದು ಖಚಿತ

ಇತಿಹಾಸ ಚಕ್ರವು ವಿಚಿತ್ರ ತಿರುವುಗಳನ್ನು ಪಡೆಯುತ್ತದೆ ಎನ್ನುವುದಕ್ಕೆ ಬಾಂಗ್ಲಾದೇಶದ ಪ್ರಸ್ತುತ ರಾಜಕೀಯ ವಿದ್ಯಮಾನಗಳೇ ಸಾಕ್ಷಿ. 1971ರಲ್ಲಿ ಯಾವ ಪಕ್ಷವು ಬಾಂಗ್ಲಾದೇಶದ ಉದಯವನ್ನೇ ವಿರೋಧಿಸಿತ್ತೋ, ಯಾವ ಸಂಘಟನೆಯು ಪಾಕಿಸ್ತಾನದ ಅಖಂಡತೆಯನ್ನು ಪ್ರತಿಪಾದಿಸಿ ಸ್ವಾತಂತ್ರ್ಯ ಹೋರಾಟಗಾರರ ವಿರುದ್ಧ ಬಂದೂಕು ಹಿಡಿದಿತ್ತೋ, ಅದೇ ಜಮಾಅತೆ ಇಸ್ಲಾಮಿಇಂದು ಬಾಂಗ್ಲಾದೇಶದ ರಾಜಕೀಯದ ಕೇಂದ್ರಬಿಂದುವಾಗಿದೆ. ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್ ಆಡಳಿತದ ಪತನದ ನಂತರ ಸೃಷ್ಟಿಯಾಗಿರುವ ರಾಜಕೀಯ ಶೂನ್ಯತೆಯನ್ನು ತುಂಬಲು, ದಶಕಗಳಿಂದ ಅಂಚಿನಲ್ಲಿದ್ದ ಈ ಬಲಪಂಥೀಯ ಪಕ್ಷವು ಸಜ್ಜಾಗಿದೆ.

ನಿಷೇಧ, ಯುದ್ಧಾಪರಾಧಗಳ ತೀರ್ಪು ಮತ್ತು ಗಲ್ಲು ಶಿಕ್ಷೆಗಳ ಸರಮಾಲೆಯ ನಡುವೆಯೂ ಈ ಪಕ್ಷವು ರಾಜಕೀಯವಾಗಿ ಮರುಹುಟ್ಟು ಪಡೆದಿರುವುದು ದಕ್ಷಿಣ ಏಷ್ಯಾದ ರಾಜಕೀಯದಲ್ಲಿ ಮಹತ್ವದ ಬದಲಾವಣೆಯಾಗಿದೆ. 1971ರಿಂದ ಇಲ್ಲಿಯವರೆಗಿನ ಜಮಾಅತೆ ಇಸ್ಲಾಮಿಯ ಈ ಪಯಣ ಹೂವಿನ ಹಾದಿಯಾಗಿರದೆ, ರಕ್ತಸಿಕ್ತ ಮತ್ತು ವಿವಾದಾತ್ಮಕ ಅಧ್ಯಾಯಗಳಿಂದ ಕೂಡಿದೆ.

ಜಮಾಅತೆ ಇಸ್ಲಾಮಿಯ ಇತಿಹಾಸವನ್ನು ಕೆದಕಿದರೆ ಸಿಗುವುದು 1971ರ ವಿಮೋಚನಾ ಯುದ್ಧದ ಕರಾಳ ಪುಟಗಳು. ಅಂದು ಪಾಕಿಸ್ತಾನದಿಂದ ಬಾಂಗ್ಲಾದೇಶ (ಅಂದಿನ ಪೂರ್ವ ಪಾಕಿಸ್ತಾನ) ಬೇರೆಯಾಗುವುದನ್ನು ಈ ಪಕ್ಷ ಉಗ್ರವಾಗಿ ವಿರೋಧಿಸಿತ್ತು. ಇದು ಇಸ್ಲಾಂನ ಏಕತೆಗೆ ಧಕ್ಕೆ ಎಂಬುದು ಅವರ ವಾದವಾಗಿತ್ತು. ಅಷ್ಟೇ ಅಲ್ಲ, ಪಾಕಿಸ್ತಾನದ ಸೇನೆಗೆ ನೆರವಾಗಲು ರಜಾಕಾರ್, ಅಲ್-ಬದ್ರ್ ಮತ್ತು ಅಲ್-ಶಮ್ಸ್ ನಂತಹ ಅರೆಸೇನಾ ಪಡೆಗಳನ್ನು ರಚಿಸಿತ್ತು. ಈ ಪಡೆಗಳು ಸ್ವಾತಂತ್ರ್ಯ ಹೋರಾಟಗಾರರ ಹತ್ಯಾಕಾಂಡದಲ್ಲಿ ಭಾಗಿಯಾಗಿದ್ದವು ಎಂಬ ಆರೋಪ ಇಂದಿಗೂ ಅವರ ಮೇಲಿದೆ. ಬಾಂಗ್ಲಾದೇಶ ಸ್ವತಂತ್ರಗೊಂಡ ತಕ್ಷಣ, ಮೊದಲ ಸರ್ಕಾರವು ಜಮಾಅತೆ ಇಸ್ಲಾಮಿಯನ್ನು ರಾಜಕೀಯವಾಗಿ ನಿಷೇಧಿಸಿತ್ತು.

ಸ್ವತಂತ್ರ ಬಾಂಗ್ಲಾದೇಶದಲ್ಲಿ ಅಸ್ತಿತ್ವವನ್ನೇ ಕಳೆದುಕೊಂಡಿದ್ದ ಜಮಾಅತ್‌ಗೆ ಆಮ್ಲಜನಕ ಸಿಕ್ಕಿದ್ದು 1975ರಲ್ಲಿ ಶೇಖ್ ಮುಜಿಬುರ್ ರೆಹಮಾನ್ ಅವರ ಹತ್ಯೆಯ ನಂತರ. ಜನರಲ್ ಜಿಯಾವುರ್ ರೆಹಮಾನ್ ಮತ್ತು ನಂತರದ ಸೇನಾ ಆಡಳಿತಗಾರರು ಧರ್ಮಾಧಾರಿತ ರಾಜಕೀಯಕ್ಕಿದ್ದ ನಿಷೇಧವನ್ನು ತೆಗೆದುಹಾಕಿದರು. ಇದು ಜಮಾಅತ್ ಪಾಲಿಗೆ ವರದಾನವಾಯಿತು. ಪಾಕಿಸ್ತಾನಕ್ಕೆ ಪರಾರಿಯಾಗಿದ್ದ ಗುಲಾಮ್ ಅಜಮ್ ಅವರಂತಹ ನಾಯಕರು ಮರಳಿ ಬಂದು ಪಕ್ಷವನ್ನು ತಳಮಟ್ಟದಿಂದ ಸಂಘಟಿಸಲು ಆರಂಭಿಸಿದರು. ಮಸೀದಿಗಳು



ಮತ್ತು ಮದ್ರಸಾಗಳ ಮೂಲಕ ತಮ್ಮ ಜಾಲವನ್ನು ವಿಸ್ತರಿಸಿದರು.

1990ರ ದಶಕದಲ್ಲಿ ಪ್ರಜಾಪ್ರಭುತ್ವ ಮರುಸ್ಥಾಪನೆಯಾದಾಗ, ಜಮಾಅತೆ ಇಸ್ಲಾಮಿ ನಿರ್ಣಾಯಕ ಶಕ್ತಿಯಾಗಿ ಬೆಳೆದಿತ್ತು. ಏಕಾಂಗಿಯಾಗಿ ಅಧಿಕಾರ ಹಿಡಿಯುವಷ್ಟು ಶಕ್ತಿ ಇಲ್ಲದಿದ್ದರೂ, ಸರ್ಕಾರ ರಚನೆಗೆ ಇವರ ಬೆಂಬಲ ಅನಿವಾರ್ಯ ಎನ್ನುವಂತಹ ಪರಿಸ್ಥಿತಿ ನಿರ್ಮಾಣವಾಯಿತು. ಬಾಂಗ್ಲಾದೇಶ ನ್ಯಾಶನಲಿಸ್ಟ್ ಪಾರ್ಟಿ (ಬಿಎನ್‌ಪಿ) ಜೊತೆ ಮೈತ್ರಿ ಮಾಡಿಕೊಂಡ ಜಮಾಅತ್, 2001-2006ರ ಅವಧಿಯಲ್ಲಿ ಸಮ್ಮಿಶ್ರ ಸರ್ಕಾರದ ಭಾಗವಾಯಿತು. ಯುದ್ಧಾಪರಾಧದ ಆರೋಪವಿದ್ದ ನಾಯಕರೇ ಮಂತ್ರಿಗಳಾಗಿ, ರಾಷ್ಟ್ರಧ್ವಜ ಇರುವ ಕಾರುಗಳಲ್ಲಿ ಓಡಾಡಿದ್ದು ಬಾಂಗ್ಲಾದೇಶದ ಇತಿಹಾಸದ ದೊಡ್ಡ ವಿಪರ್ಯಾಸವಾಗಿತ್ತು.

2008ರಲ್ಲಿ ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್ ಭರ್ಜರಿ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಾಗ, ಜಮಾಅತ್ ಪಾಲಿಗೆ ಕತ್ತಲ ಯುಗ ಆರಂಭವಾಯಿತು. 1971ರ ಯುದ್ಧಾಪರಾಧಗಳ ವಿಚಾರಣೆಗೆ ಅಂತಾರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿ ಸ್ಥಾಪಿಸಲಾಯಿತು. ಜಮಾಅತ್‌ನ ಮತಿವುರ್ ರೆಹಮಾನ್ ನಿಜಾಮಿ, ಅಲಿ ಅಹ್ಸಾನ್ ಮೊಹಮ್ಮದ್ ಮುಜಹಿದ್ ಸೇರಿದಂತೆ ಹಲವು ಉನ್ನತ ನಾಯಕರನ್ನು ಗಲ್ಲಿಗೇರಿಸಲಾಯಿತು.

2013ರಲ್ಲಿ ಹೈಕೋರ್ಟ್ ಜಮಾಅತ್‌ನ ನೋಂದಣಿಯನ್ನು ರದ್ದುಗೊಳಿಸಿತು, ಇದರಿಂದಾಗಿ ಅವರು ಚುನಾವಣೆಯಲ್ಲಿ ಸ್ಪರ್ಧಿಸುವ ಅರ್ಹತೆಯನ್ನು ಕಳೆದುಕೊಂಡರು. ಕಳೆದ ಒಂದೂವರೆ ದಶಕದಲ್ಲಿ ಪಕ್ಷದ ಕಚೇರಿಗಳಿಗೆ ಬೀಗ ಬಿದ್ದಿತ್ತು, ನಾಯಕರು ಜೈಲು ಸೇರಿದ್ದರು ಅಥವಾ ಭೂಗತರಾಗಿದ್ದರು.

ಆದರೆ ಆಗಸ್ಟ್ 2024ರಲ್ಲಿ ವಿದ್ಯಾರ್ಥಿ ಆಂದೋಲನದ ಕಿಚ್ಚಿಗೆ ಸಿಲುಕಿ ಶೇಖ್ ಹಸೀನಾ ದೇಶಬಿಟ್ಟು ಓಡಿಹೋದ ಘಟನೆ, ಜಮಾಅತೆ ಇಸ್ಲಾಮಿಗೆ ಅನಿರೀಕ್ಷಿತವಾಗಿ ಬಾಗಿಲು ತೆರೆಯಿತು. ಹಸೀನಾ ಸರ್ಕಾರ ಪತನಗೊಳ್ಳುವ ಕೆಲವೇ ದಿನಗಳ ಮೊದಲು ಜಮಾಅತ್ ಅನ್ನು ಭಯೋತ್ಪಾದಕ ಸಂಘಟನೆ ಎಂದು ಘೋಷಿಸಿ ನಿಷೇಧಿಸಿತ್ತು. ಆದರೆ, ಹಸೀನಾ ಪಲಾಯನದ ನಂತರ ರಚನೆಯಾದ ಮಧ್ಯಂತರ ಸರ್ಕಾರವು ಆ ನಿಷೇಧವನ್ನು ರದ್ದುಗೊಳಿಸಿತು.

ಈಗಿನ ಪರಿಸ್ಥಿತಿ ತೀರಾ ಭಿನ್ನವಾಗಿದೆ. ಅವಾಮಿ ಲೀಗ್‌ನ ಪ್ರಮುಖ ನಾಯಕರು ತಲೆಮರೆಸಿಕೊಂಡಿದ್ದಾರೆ, ಪಕ್ಷ ಅಸ್ತವ್ಯಸ್ತವಾಗಿದೆ. ಪ್ರಬಲ ವಿರೋಧ ಪಕ್ಷವಾಗಿದ್ದ ಬಿಎನ್‌ಪಿ ಈಗ ಆಡಳಿತ ಪಕ್ಷವಾಗಿ ತಾರೀಖ್ ರೆಹಮಾನ್ ದೇಶದ ಚುಕ್ಕಾಣಿ ಹಿಡಿದಿದ್ದಾರೆ. ಇಂತಹ ಸಂದರ್ಭದಲ್ಲಿ, ದಶಕಗಳಿಂದ ಸಾಂಸ್ಥಿಕವಾಗಿ ಸದೃಢವಾಗಿರುವ, ಶಿಸ್ತಿನ ಕಾರ್ಯಕರ್ತರ ಪಡೆಯನ್ನು ಹೊಂದಿರುವ ಜಮಾಅತೆ ಇಸ್ಲಾಮಿ ಸಹಜವಾಗಿಯೇ ಪ್ರಧಾನ ಪ್ರತಿಪಕ್ಷದ ಸ್ಥಾನವನ್ನು ಆಕ್ರಮಿಸಿಕೊಂಡಿದೆ.

ಪ್ರಸ್ತುತ ಜಮಾಅತೆ ಇಸ್ಲಾಮಿ ತನ್ನ ಹಳೆಯ ಯುದ್ಧಾಪರಾಧಿ ಇಮೇಜ್ ಬದಲಿಸಿಕೊಳ್ಳಲು ಯತ್ನಿಸುತ್ತಿದೆ. ಇತ್ತೀಚೆಗೆ ನಡೆದ ವಿದ್ಯಾರ್ಥಿ ಹೋರಾಟದಲ್ಲಿ ತಮ್ಮ ಕಾರ್ಯಕರ್ತರೂ ಮೃತಪಟ್ಟಿದ್ದಾರೆ ಎಂದು ಹೇಳುವ ಮೂಲಕ ಯುವಜನರ ಸಹಾನುಭೂತಿ ಗಳಿಸಲು ಮುಂದಾಗಿದೆ. ಹಿಂಸಾಚಾರದ ಬದಲಿಗೆ ಸುಧಾರಣೆ ಮತ್ತು ರಾಷ್ಟ್ರ ನಿರ್ಮಾಣದ ಮಾತನಾಡುತ್ತಿದೆ.

ಆದರೆ, ಬಾಂಗ್ಲಾದೇಶದ ಜಾತ್ಯತೀತ ಮೌಲ್ಯಗಳಿಗೆ ಜಮಾಅತ್ ಇಂದಿಗೂ ಸವಾಲಾಗಿದೆ. ಇಸ್ಲಾಮಿಕ್ ರಾಷ್ಟ್ರದ ಪರಿಕಲ್ಪನೆಯೇ ಅವರ ಮೂಲ ಸಿದ್ಧಾಂತ. ಅವಾಮಿ ಲೀಗ್ ಇಲ್ಲದ ಸಂಸತ್ತಿನಲ್ಲಿ ಅಥವಾ ಮುಂಬರುವ ಚುನಾವಣೆಯಲ್ಲಿ ಜಮಾಅತ್ ನಿರ್ಣಾಯಕ ಪಾತ್ರ ವಹಿಸುವುದು ಖಚಿತ.

ಒಟ್ಟಿನಲ್ಲಿ, 53 ವರ್ಷಗಳ ಹಿಂದೆ ಯಾವ ದೇಶದ ಅಸ್ತಿತ್ವವನ್ನು ನಿರಾಕರಿಸಿದ್ದರೋ, ಇಂದು ಅದೇ ದೇಶದ ಭವಿಷ್ಯವನ್ನು ನಿರ್ಧರಿಸುವ ಶಕ್ತಿಯಾಗಿ ಜಮಾಅತೆ ಇಸ್ಲಾಮಿ ಬೆಳೆದು ನಿಂತಿದೆ. ಇದು ಪ್ರಜಾಪ್ರಭುತ್ವದ ಗೆಲುವೋ ಅಥವಾ ಇತಿಹಾಸದ ವ್ಯಂಗ್ಯವೋ ಎಂಬುದನ್ನು ಕಾಲವೇ ನಿರ್ಧರಿಸಬೇಕು.

ದಾವಣಗೆರೆ ದಕ್ಷಿಣ ಉಪಚುನಾವಣೆ: ಕಾಂಗ್ರೆಸ್ ಟಿಕೆಟ್ ಗೆ ಒತ್ತಾಯಿಸಿ ಮುಸ್ಲಿಂ ಸಮುದಾಯದ ಸಭೆ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡಬೇಕು ಎಂದು ನಿರ್ಣಯ ಕೈಗೊಂಡು, ದಾವಣಗೆರೆ ಲೋಕಸಭಾ ಕ್ಷೇತ್ರದ ಮಸೀದಿಗಳ ಮುತುವಲ್ಲಿ ಹಾಗೂ ವಿವಿಧ ಪಕ್ಷಗಳ ಮುಸ್ಲಿಂ ಮುಖಂಡರು ಮತ್ತು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ದಾವಣಗೆರೆ ತಾಜ್ ಪ್ಯಾಲೇಸ್ ನಲ್ಲಿ ಇಂದು ಸಭೆ ನಡೆಸಿ ಒತ್ತಾಯಿಸಿದರು.

ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ () ಕೆ. ಅಬ್ದುಲ್ ಜಬ್ಬಾರ್ ಸಾಬ್ ''ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದಿಂದ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡಬೇಕು ಎಂದು ಒಮ್ಮತದ ನಿರ್ಣಯ ಕೈಗೊಳ್ಳಲಾಗಿದೆ. ಕಾಂಗ್ರೆಸ್ ಪಕ್ಷದಿಂದ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡಿದರೆ ಅಹಿಂದ ಮತಗಳ ಬೆಂಬಲ ಸಿಗಲಿದೆ. ಈ ಹಿಂದಿನಿಂದಲು ಕಾಂಗ್ರೆಸ್ ಪಕ್ಷದಲ್ಲಿ ಒಂದೇ ಕುಟುಂಬಕ್ಕೆ ಟಿಕೆಟ್ ಎನ್ನುವುದು ಇನ್ನೂ ಮುಂದೆ ಸಾಧ್ಯವಿಲ್ಲ'' ಎಂದು ಸ್ಪಷ್ಟಪಡಿಸಿದರು.

''ಶಾಮನೂರು ಕುಟುಂಬವನ್ನು 1994 ರಿಂದ ಮುಸ್ಲಿಂ ಸಮುದಾಯ ಗೆಲ್ಲಿಸಿಕೊಂಡು ಬಂದಿದೆ. ಶೈಕ್ಷಣಿಕ, ಆರ್ಥಿಕ, ಸಾಮಾಜಿಕ, ರಾಜಕೀಯವಾಗಿ. ಹಿಂದುಳಿದ ಸಮುದಾಯವಾದ ಮುಸಲ್ಮಾನರಿಗೆ ಶಾಮನೂರು ಕುಟುಂಬ ಬೆಂಬಲಿಸಬೇಕು'' ಎಂದು ಅಭಿಪ್ರಾಯಪಟ್ಟರು.

''ಶಾಮನೂರು ಕುಟುಂಬಕ್ಕೆ ಮುಸ್ಲಿಂ ಸಮುದಾಯ ಈ ಹಿಂದಿನಿಂದಲೂ ತ್ಯಾಗ ಮಾಡಿಕೊಂಡು ಬಂದಿದೆ. ಇನ್ನೂ ಮುಂದೆ ಇದನ್ನು ಅರಿತು ಶಾಮನೂರು ಕುಟುಂಬ ಮುಸಲ್ಮಾನರಿಗೆ ಬೆಂಬಲಿಸಬೇಕು. ಈಗ ಇಲ್ಲವೆಂದರೆ ಯಾವತ್ತೂ ನಮಗೆ ರಾಜಕೀಯ ನ್ಯಾಯ ಸಿಗಲು ಸಾಧ್ಯವಿಲ್ಲ. ಅದರಿಂದ ತಮ ತಮ್ಮ ಏರಿಯದಲ್ಲಿ ಹೆಚ್ಚು ಹೆಚ್ಚು ಚರ್ಚೆ ಮಾಡಿ'' ಎಂದು ಮುಸ್ಲಿಂ ಬಾಂಧವರಿಗೆ ಕರೆ ನೀಡಿದರು

ಜೆಡಿಎಸ್ ಪಕ್ಷದ ಜೆ.ಅಮನುಲ್ಲಾ ಖಾನ್ ''ದಾವಣಗೆರೆ ಜಿಲ್ಲೆ ಎಲ್ಲ ಮುತುವಲ್ಲಿಗಳು ಹಾಗೂ ರಾಜಕೀಯ ಮುಖಂಡರುಗಳು ಹಾಗೂ ಮುಸ್ಲಿಂ ವಿವಿಧ ಸಂಘ ಸಂಸ್ಥೆಗಳ ಮುಖಂಡರು ಸೇರಿ ಒಂದು ತೀರ್ಮಾನಕ್ಕೆ ಬರಬೇಕಾಗಿದೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದ ಟಿಕೆಟ್ ಸಿಗದೇ ಇದ್ದರೆ ಮುಂದಿನ ಯಾವ ಚುನಾವಣೆಯಲ್ಲೂ ನಾವು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ



ನೀಡುವುದಿಲ್ಲ ಎಂದು ಪಟ್ಟು ಹಿಡಿಯಬೇಕು'' ಎಂದು ಹೇಳಿದರು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಆಕಾಂಕ್ಷಿ ಸಾಧಿಕ್ ಪೈಲ್ವಾನ್ ಮಾತನಾಡ ''ಕಾಂಗ್ರೆಸ್ ಪಕ್ಷ ನಮ್ಮ ಮತಗಳ ಬೆಂಬಲ ಇಲ್ಲದೆ ಗೆಲ್ಲಲು ಸಾಧ್ಯವಿಲ್ಲ ನನ್ನ ಆತ್ಮೀಯ ಸ್ನೇಹಿತ ಕೆ. ಅಬ್ದುಲ್ ಜಬ್ಬಾರ್ ಮತ್ತು ನನಗೆ, ಯಾರಿಗೂ ಟಿಕೆಟ್ ನೀಡಿದರೂ ನಮ್ಮ ಮುಸ್ಲಿಂ ಸಮುದಾಯ ಒಗ್ಗಟ್ಟಿನಿಂದ ಬೆಂಬಲಿಸಲಿದೆ. () ಎಸ್ ಐ ಆರ್ ವಿಷಯದಲ್ಲಿ ಮುಸ್ಲಿಂ ಸಮುದಾಯದ ವಿದ್ಯಾವಂತ ಯುವಕರು ಜಾಗೃತಿ ಯಿಂದ ಕೆಲಸ ಮಾಡಿ ತಮ ಮತ ಉಳಿಸಿಕೊಳ್ಳಬೇಕು'' ಎಂದು ಸೂಚಿಸಿದರು.ಎಐಎಂಐಎಂ () ಪಕ್ಷದ ದಾವಣಗೆರೆ ಜಿಲ್ಲಾಧ್ಯಕ್ಷ ಮಹಮ್ಮದ್ ಅಲಿ ಶೋಯೇಬ್ ಮಾತನಾಡಿ

''ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷ ಉಪ ಚುನಾವಣೆಯಲ್ಲಿ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡಿದರೆ ಸಮಾಜಿಕ ನ್ಯಾಯ ನೀಡದಂತೆ. ಇಲ್ಲ ಎಂದರೆ ಪಕ್ಷ ತನ್ನ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಲಿದೆ ಹಾಗೂ ಹೈದರಾಬಾದ್ ಸಂಸದರಾದ ಅಸಾವುದ್ದೀನ್ ಓವೈಸಿ ದಾವಣಗೆರೆ ಬಂದು ಪ್ರಚಾರ ಮಾಡಲಿದ್ದಾರೆ'' ಎಂದು ತಿಳಿಸಿದರು.

ಸಭೆಯಲ್ಲಿ ವಿವಿಧ ಪಕ್ಷಗಳ ಮುಖಂಡರು ಹಾಗೂ ದಾವಣಗೆರೆ ಜಿಲ್ಲೆಯ ಬಹುತೇಕ ಮಸೀದಿಗಳ ಮುತುವಲ್ಲಿಗಳು ಮತ್ತು ಮುಸ್ಲಿಂ ಸಮುದಾಯದ ಬಹುತೇಕ ಸಂಘ ಸಂಸ್ಥೆಗಳ ಮುಖಂಡರು ರಾಜಕೀಯವಾಗಿ ಒಂದು ವೇದಿಕೆಯ ಮೇಲೆ ಕಾಣಿಸಿಕೊಂಡರು.

ಈ ಸಭೆಯಲ್ಲಿ ಮುಸ್ಲಿಂ ಒಕ್ಕೂಟದ ಅಬ್ದುಲ್ ಘನಿ ತಾಹಿರ್, ಜೆಡಿಎಸ್ ಪಕ್ಷದ ಟಿ.ಅಸ್ಗರ್ ಬಿಜೆಪಿಯ ಸಿ. ನಾಸೀರ್ ಅಹ್ಮದ್, ಆಮ್ ಅದ್ಮಿ ಪಕ್ಷದ ಅದಿಲ್ ಖಾನ್ ಪಕ್ಷದ ಮುಖಂಡರು ಹಾಗೂ ದಾವಣಗೆರೆ ಜಿಲ್ಲೆಯ ಎಲ್ಲಾ ಮಸೀದಿಗಳ ಮುತುವಲ್ಲಿಗಳು ಸೇರಿ ಮುಸ್ಲಿಂ ಸಮುದಾಯದ ಅನೇಕ ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR